ಸಂಪುಟ 01 | ಸಂಚಿಕೆ 71 | ಬುಧವಾರ 21 ಜನವರಿ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

MA ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ
REGIONAL KANNADA DAILY MORNING

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ದಾಸೋಹ ದಿನ**

ದಾಸೋಹ ದಿನ ಎಂದರೆ ಕರ್ನಾಟಕದ ತ್ರಿವಿಧ ದಾಸೋಹಿಗಳೆಂದು ಪ್ರಸಿದ್ಧರಾದ ಶ್ರೀ ಶಿವಕುಮಾರ ಸ್ವಾಮೀಜಿ ಅವರು ಲಿಂಗೈಕ್ಯರಾದ ದಿನವಾದ ಜನವರಿ 21 ಅನ್ನು ರಾಜ್ಯ ಸರ್ಕಾರವು ಆಚರಿಸಲು ನಿರ್ಧರಿಸಿದೆ, ಅವರ ಸೇವೆ ಮತ್ತು ತ್ಯಾಗವನ್ನು ಸ್ಮರಿಸಲು ಈ ದಿನವನ್ನು ಆಚರಿಸಲಾಗುತ್ತದೆ. ಸರ್ಕಾರವು ಈ ದಿನದಂದು ಸಾಮಾಜಿಕ, ಧಾರ್ಮಿಕ ಮತ್ತು ಶೈಕ್ಷಣಿಕ ಕ್ಷೇತ್ರಗಳಲ್ಲಿ ಶ್ರೀಗಳ ಕಾರ್ಯಗಳನ್ನು ಸ್ಮರಿಸುವ ಕಾರ್ಯಕ್ರಮಗಳನ್ನು ಆಯೋಜಿಸಲು ಸೂಚಿಸಿದೆ.

**2) ತ್ರಿಪುರ, ಮಣಿಪುರ ಮತ್ತು ಮೇಘಾಲಯ ಸಂಸ್ಥಾಪನಾ ದಿನ**

ಜನವರಿ 21, 1972 ರಂದು, ತ್ರಿಪುರ, ಮಣಿಪುರ ಮತ್ತು ಮೇಘಾಲಯ ರಾಜ್ಯಗಳು 1971 ರ ಈಶಾನ್ಯ ಪ್ರದೇಶ (ಮರು-ಸಂಘಟನೆ) ಕಾಯ್ದೆಯಡಿಯಲ್ಲಿ ಪೂರ್ಣ ಪ್ರಮಾಣದ ರಾಜ್ಯಗಳಾದವು. ಆದ್ದರಿಂದ, ತ್ರಿಪುರ, ಮಣಿಪುರ ಮತ್ತು ಮೇಘಾಲಯಗಳು ಜನವರಿ 21 ರಂದು ತಮ್ಮ ರಾಜ್ಯತ್ವ ದಿನವನ್ನು ಆಚರಿಸುತ್ತವೆ

## ಸುಭಾಷಿತ

ಕ್ಷಮಿಸುವುದು ಉತ್ತಮ. ಮರೆತುಬಿಡುವುದು ಸರ್ವೋತ್ತಮ. ?

ರಾಬರ್ಟ್ ಬ್ರೌನಿಂಗ್



❑ ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ ತಾಲೂಕಿನ ಮೈಲೇಶ್ವರದ ಬ್ರಿಲಿಯಂಟ್ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢ ಶಾಲೆಯಲ್ಲಿ ಸೋಮವಾರ ಮಹಾಯೋಗಿ ಶ್ರೀ ವೇಮನ ಅವರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಶ್ರೀ ಮಾರುತಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಎನ್.ಬಿ. ನಡುವಿನಮನಿ, ಉಪಾಧ್ಯಕ್ಷ ಆರ್ ಬಿ ನಡುವಿನಮನಿ, ನಿರ್ದೇಶಕ ಎಸ್ ಹೆಚ್ ಪಾಟೀಲ,ಮು.ಗು. ಡಾ.ವಿನಾಯಕ ಪಟಗಾರ, ಶಿಕ್ಷಕ ವರ್ಗ ಹಾಗೂ ವಿದ್ಯಾರ್ಥಿಗಳು ಇದ್ದರು.

# ಲಕ್ಕುಂಡಿ :ರಾಶಿ ರಾಶಿ ಶಿಲ್ಪಕಲೆಗಳು ಪತ್ತೆ

ಗದಗ: ಲಕ್ಕುಂಡಿ ಶಿಲ್ಪಕಲೆಗಳ, ದೇವಾಲಯಗಳ ಸ್ವರ್ಗ, ಇಲ್ಲಿ ಚಿನ್ನದ ನಿಧಿ ಸಿಕ್ಕ ಬೆನ್ನಲ್ಲೇ ಉತ್ಖನನ ಕಾರ್ಯ ಆರಂಭ ವಾಗಿದೆ. ಕೋಟೆ ಗೋಡೆಯಲ್ಲಿ ಹುದುಗಿ ಹೋಗಿರುವ ರಾಶಿ ರಾಶಿ ಶಿಲ್ಪಕಲೆಗಳು ಪತ್ತೆಯಾಗಿವೆ. ಉತ್ಖನನ ನಡೆಯುತ್ತಿರುವ ಜಾಗದಲ್ಲಿ ಇಂದು ಕೂಡ ಪುರಾತನ ಶಿಲೆಗಳು ಪತ್ತೆಯಾಗಿವೆ. ಪುರಾತನ ಕಾಲದ ಕೊಡಲಿ, ಗಂಟೆ, ನಾಗರ ಮೂರ್ತಿ, ಶಿವಲಿಂಗದ ಪಾಣಿ ಪೀಠ ಸೇ-ರಿದಂತೆ ಹಲವು ಅವಶೇಷಗಳು ಪತ್ತೆಯಾಗಿದ್ದು, ತೀವ್ರ ಕುತೂಹಲ ಮೂಡಿಸುತ್ತಿದೆ. ಇನ್ನು ಈ ವೇಳೆ ಖಾವಿಧಾರಿಯೊಬ್ಬ ಉತ್ಖನನ ಜಾಗಕ್ಕೆ ಎಂಟ್ರಿ ಕೊಟ್ಟು ವಿಚಿತ್ರವಾಗಿ ವರ್ತಿಸಿದ್ದಾರೆ.

ಇಂದು ಸಿಕ್ಕಿದ್ದೇನು: ಗದಗ ತಾಲೂಕಿನ ಐತಿಹಾಸಿಕ ಲಕ್ಕುಂಡಿ ಗ್ರಾಮದಲ್ಲಿ ನಿಧಿ ಸಿಕ್ಕ ಬೆನ್ನಲ್ಲೇ ಉತ್ಖನನ ಕಾರ್ಯ ಆರಂಭವಾಗಿದೆ. ಇಂದು 4 ನೇ ದಿನದ ಉತ್ಖನನ ಕಾರ್ಯ ನಡೆದಿದೆ. ಐತಿಹಾಸಿಕ ದೇವಾಲಯಗಳಿಗೆ ಬಳಸಿದ ಕಲಾಕೃತಿ ಹೊಂದಿರುವ ಶಿಲೆಗಳು ಪತ್ತೆಯಾಗಿದೆ. ಕಲೆಗಳ ಶ್ರೀಮಂತ ನಾಡು ಲಕ್ಕುಂಡಿ ರಾಜ್ಯದ ಜನರ ಕುತೂಹಲ ಹೆಚ್ಚಿಸುತ್ತಿದೆ.



ಚಿನ್ನದಲ್ಲಿ ಮಾತ್ರ ಶ್ರೀಮಂತಿಕೆ ಅಲ್ಲ. ಕಲೆಗಳಲ್ಲೂ ಶ್ರೀಮಂತಿಕೆ ಹೊಂದಿದ ನಾಡು ಲಕ್ಕುಂಡಿ ಅನ್ನೋದು ಶಿಲ್ಪಕಲೆಗಳು ಸಾರಿ ಸಾರಿ ಹೇಳುತ್ತಿವೆ. 4ನೇ ದಿನದ ಉತ್ಖನನ ಜಾಗದಲ್ಲಿ ಆಯುಧ ಮಾದರಿಯ ಕಲ್ಲು ಪತ್ತೆಯಾಗಿದೆ. ಇದು ಶಿಲಾಯುಗದಲ್ಲಿ ಬಳಕೆಯಾಗುತ್ತಿದ್ದ ಕೊಡಲಿ ಆಕಾರದ ಶಿಲೆ ಅಂಡಾಕಾರದಲ್ಲಿದ್ದು, ಮುಂದಿನ ಒಂದು ಭಾಗ ಮೊನಚಾಗಿದೆ. ಐತಿಹಾಸಿಕ ದೇವಸ್ಥಾನದ ಸ್ತಂಭದ ಮತ್ತು ವಿತಾನದ (ಛತ್ತು) ಮಧ್ಯದಲ್ಲಿರುವ ಬೋದಿಗೆ ಭಾಗದ ಅವಶೇಷ ಪತ್ತೆ ಆಗಿದೆ. ಇದೇ ವೇಳೆ ಲೋಹದ ಗಂಟೆಯೊಂದು ಪತ್ತೆಯಾಗಿದೆ.

ಪುರಾತತ್ವ ಇಲಾಖೆ ಸಿಬ್ಬಂದಿಗಳು ಪರಿಶೀಲನೆ ಮಾಡಿ ವಶಕ್ಕೆ ಪಡೆದುಕೊಂಡಿದ್ದಾರೆ. ನೂರಾರು ವರ್ಷಗಳ ಇತಿಹಾಸ ಹೊಂದಿರುವ ಈ ಶಿಲೆಯು ಮೂರು ಅಡಿ ಆಳದಲ್ಲಿ ದೊರಕಿದೆ. ಈ ಹಿಂದೆ ಉತ್ಖನನದಲ್ಲಿ ಶಿವಲಿಂಗ ಪಾಣಿಪೀಠ ಮತ್ತು ಶಿವಲಿಂಗ ಹಾಗೂ ನಾಗರ ಚಿತ್ರವಿರುವ ಅವಶೇಷಗಳು ಪತ್ತೆಯಾಗಿದ್ದವು. ಅರ್ಧ ನಾರೀಶ್ವರ ದೇವಾಲಯ ಪತ್ತೆ ತಾಲೂಕಿನ ಲಕ್ಕುಂಡಿ ಗ್ರಾಮದ ಬಗೆದಷ್ಟೂ ಪುರಾತನ ವಸ್ತುಗಳು ಪತ್ತೆಯಾಗುತ್ತಲೇ ಇವೆ. ಇದೀಗ ಚೌಕಿಮಠ ಕುಟುಂಬದ ವಾಸದ ಮನೆಯೊಳಗೆ ಅಪರೂಪದ ಐತಿಹಾಸಿಕ ಅರ್ಧನಾರೀಶ್ವರ ದೇವಸ್ಥಾನ ಪತ್ತೆಯಾಗಿದ್ದು, ಪುರಾತತ್ವ ವಲಯದಲ್ಲಿ ಸಂಚಲನ ಮೂಡಿಸಿದೆ. ಶಿವಯ್ಯ ಹಾಗೂ ಶೇಖರಯ್ಯ ಚೌಕಿಮಠ ಎಂಬವರ ಕುಟುಂಬ ದೇವಸ್ಥಾನದೊಳಗೆ ಮನೆ ನಿರ್ಮಾಣ ಮಾಡಿಕೊಂಡು ವಾಸಿಸುತ್ತಿದೆ. ಈ ಮನೆಯಲ್ಲಿ ಸುಮಾರು 5-6 ಮಂದಿ ವಾಸ ಮಾಡುತ್ತಿದ್ದಾರೆ. ದೇವಸ್ಥಾನದ ಹೊರಭಾಗದಲ್ಲಿ ಮನೆಯಿದೆ ಎನ್ನಲಾಗಿದೆ. 4ನೇ ಪುಟಕ್ಕೆ

# ಮಹಾರಾಣಾ ಪ್ರತಾಪ್ ದೇಶ ಕಂಡ ಅಪ್ರತಿಮ ವೀರ :ವಿಜಯಸಿಂಗ್



❑ ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ಮಹಾರಾಣಾ ಪ್ರತಾಪ್ ಸಿಂಹ ಅವರು ಮಾತೃಭೂಮಿಯ ರಕ್ಷಣೆಗಾಗಿ ತನ್ನ ಸರ್ವವನ್ನೂ ತ್ಯಾಗ ಮಾಡಿದ ಮಹಾನ್ ನಾಯಕ,ಅವರ ದೇಶಪ್ರೇಮ ಹಾಗೂ ತ್ಯಾಗದ ಜೀವನ ನಮಗೆಲ್ಲ-ರಿಗೂ ಮಾದರಿಯಾಗಿದೆ ಎಂದು ಯುವ ಮುಖಂಡ ವಿಜಯಸಿಂಗ್ ಹಜೇರಿ ಹೇಳಿದರು.

ಸೋಮವಾರ ಪಟ್ಟಣದ ಮಹಾರಾಣಾ ಪ್ರತಾಪ್ ಸಿಂಹ ವೃತ್ತದಲ್ಲಿ ರಾಣಾ ಪ್ರತಾಪರ ಹುತಾತ್ಮ ಸ್ಮರಣಾರ್ಥ ರಜಪೂತ ಸಮಾಜದ ವತಿಯಿಂದ ಹಮ್ಮಿಕೊಂಡಿದ್ದ ಜ್ಯೋತಿ ಬೆಳಗಿಸುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಭಾರತದ ಇತಿಹಾಸದಲ್ಲಿ ಮಹಾರಾಣಾ ಪ್ರತಾಪ ರಂಥಹ ಶೌರ್ಯ ಹಾಗೂ ಪರಾಕ್ರಮದ ಬೇರೊಬ್ಬ ಅರಸ ನಮಗೆ ಸಿಗುವುದಿಲ್ಲ. ಅವರ ಸ್ವಾಭಿಮಾನದ ಬದುಕು ಭಾರತೀಯರ ಪಾಲಿಗೆ ಸ್ಫೂರ್ತಿಯಾಗಿದೆ ಎಂದರು.ರಾಜು ರಜಪೂತ ಮಹಾರಾಣಾ ಪ್ರತಾಪ ಸಿಂಹ ಅವರ ಜೀವನ ಕುರಿತು ಪ್ರಸ್ತಾವಿಕವಾಗಿ ಮಾತನಾಡಿದರು.ಈ ಸಮಯದಲ್ಲಿ ರಜಪೂತ ಸಮಾಜದ ಅಧ್ಯಕ್ಷ ಹ-ರಿಸಿಂಗ್ ಮೂಲಿಮನಿ,ಉಪಾಧ್ಯಕ ರತನಸಿಂಗ್ ಕೊಕಟನೂರ,ನಿವೃತ್ತಯೋಧ ಶ್ರೀಪಾಲ್ ಸಂಗಮಿ, ಮಾನಸಿಂಗ್ ಕೊಕಟನೂರ, ಜಿ.ಜಿ.ಮದರಕಲ್ಲ,-ಎಂ.ಕೆ. ಪಟ್ಟಣಶೆಟ್ಟಿ, ಭರತಸಿಂಗ್ ವಿಜಾಪುರ, ಮುದುಕಪ್ಪ ಬಡಿಗೇರ, ರಾಘು ಚೌಹಾಣ, ಗೋವಿಂದಸಿಂಗ್ ಗೌಡಗೇರಿ, ಸುರೇಶ್ ಹಜೇರಿ, ಬಾಲಾಜಿಸಿಂಗ್ ವಿಜಾಪುರ, ಗೋವಿಂದಸಿಂಗ್ ಮೂಲಿಮನಿ, ದಿಲೀಪ ಹಜೇರಿ,ವಿಠ್ಠಲ್ ಹಜೇರಿ, ಪ್ರಹ್ಲಾದ್ ಹಜೇರಿ, ಕೇಸರಸಿಂಗ್ ದೇವಿ, ಪಿಂಟು ಹಜೇರಿ, ಸೂರಜ ಹಜೇರಿ, ಆನಂದ ಹಜೇರಿ, ಬಾಲಾಜಿ ಬಾಯ್ಸ್ ಇದ್ದರು.

# ಶ್ರೀ ಮೌನೇಶ್ವರ ದೇವಸ್ಥಾನದ ಬಾಗಿಲು ತೆರೆದು ದಿನನಿತ್ಯ ಪೂಜೆ ಮಾಡಲು ಬೃಹತ್ ಪಾದಯಾತ್ರೆ

❑ ನೈಜ್ಯ ದೆಸೆ ನ್ಯೂಸ್

ಕೊಪ್ಪಳ: ಜಿಲ್ಲಾ ವಿಶ್ವಕರ್ಮ ಸಮಾಜ (ರಿ.) ಕೊಪ್ಪಳ ಹಾಗೂ ವಿಶ್ವಕರ್ಮ ಸಮಾಜದ ಎಲ್ಲಾ ಸಂಘಟನೆಗಳ ಸಹಯೋಗದೊಂದಿಗೆ, ಜಿಲ್ಲೆಯ ಲಿಂಗನಬಂಡಿಯಲ್ಲಿರುವ ಶ್ರೀ ಮೌನೇಶ್ವರ ದೇವಸ್ಥಾನದ ಬಾಗಿಲು ತೆರೆದು ದಿನನಿತ್ಯ ಪೂಜೆ ಮಾಡಲು ಅವಕಾಶ ಕಲ್ಪಿಸಬೇಕೆಂದು ಆಗ್ರಹಿಸಿ ಬೃಹತ್ ಪಾದಯಾತ್ರೆಯನ್ನು ಹಮ್ಮಿಕೊಳ್ಳಲಾಗಿದೆ.

ದೀರ್ಘಕಾಲದಿಂದ ಭಕ್ತಾದಿಗಳ ಆರಾಧ್ಯ ದೈವವಾಗಿರುವ ಶ್ರೀ ಮೌನೇಶ್ವರ ದೇವಸ್ಥಾನದ ಪೂಜೆ ಪುರಸ್ಕಾರಗಳಿಗೆ ಅಡೆತಡೆ ಉಂಟಾಗಿರುವ ಹಿನ್ನೆಲೆಯಲ್ಲಿ, ಸಮಾಜದ ಒಗ್ಗಟ್ಟನ್ನು ಪ್ರದರ್ಶಿಸಲು ಮತ್ತು ಸರ್ಕಾರದ ಗಮನ ಸೆಳೆಯಲು ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಪಾದಯಾತ್ರೆಯ ವಿವರಗಳು: ದಿನಾಂಕ: 20-01-2026 ರಿಂದ 21-01-2026 ರವರೆಗೆ. ಗಮ್ಯಸ್ಥಾನ:




ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿ.

ಈ ಪಾದಯಾತ್ರೆಯಲ್ಲಿ ವಿಶ್ವಕರ್ಮ ಸಮಾಜದ ಮುಖಂಡರು, ವಿವಿಧ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಸಮಸ್ತ ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಈ ಮೂಲಕ ವಿನಂತಿಸಲಾಗಿದೆ. ನಮ್ಮ ಧಾರ್ಮಿಕ ಹಕ್ಕಿಗಾಗಿ ನಡೆಯುವ ಈ ಶಾಂತಿಯುತ ಹೋರಾಟಕ್ಕೆ ಎಲ್ಲರ ಸಹಕಾರ ಅಗತ್ಯವಾಗಿದೆ. ಜಿಲ್ಲಾ ವಿಶ್ವಕರ್ಮ ಸಮಾಜ (ರಿ.) ಕೊಪ್ಪಳ ಮತ್ತು ವಿಶ್ವಕರ್ಮ ಸಮಾಜದ ಎಲ್ಲಾ ಸಂಘಟನೆಗಳು.

# ಕೊಪ್ಪಳದ ಹಸಿರೀಕರಣಕ್ಕೆ ಆದ್ಯತೆ: ಪ್ರಸನ್ನ ಗಡಾದ

❑ ನೈಜ್ಯ ದೆಸೆ ನ್ಯೂಸ್

ಕೊಪ್ಪಳ: 'ನನ್ನ ರಾಜಕೀಯ ಜೀವನದಲ್ಲಿ ಅತ್ಯಂತ ಮಹತ್ವದ ದಿನ ಇದಾಗಿದ್ದು, ಕೊಪ್ಪಳ ನಗರದಲ್ಲಿ ಹಸಿರೀಕರಣಕ್ಕೆ ಆದ್ಯತೆ ನೀಡುತ್ತೇನೆ' ಎಂದು ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ನೂತನ ಅಧ್ಯಕ್ಷ ಪ್ರಸನ್ನ ಗಡಾದ ಹೇಳಿದರು. ನಗರ ಪ್ರಾಧಿಕಾರದ ಕಚೇರಿ ಆವರಣದಲ್ಲಿ ಸೋಮವಾರ ನಡೆದ ಪದಗ್ರಹಣ ಕಾರ್ಯಕ್ರಮದಲ್ಲಿ ಅಧಿಕಾರ ಸ್ವೀಕರಿಸಿ ಮಾತನಾಡಿದ ಅವರು,'ಪಕ್ಷದ ಎಲ್ಲ ಹಿರಿಯರು ಸೇರಿ ನೀಡಿರುವ ಅಧಿಕಾರವನ್ನು ಜನರ ಹಾಗೂ ನಗರದ ಸೇವೆಗೆ ಮೀಸಲಿಡುವ ಕೆಲಸ ಮಾಡುತ್ತೇನೆ.

ಪಕ್ಷದ ಹಿರಿಯರ ಹಾಗೂ ಪ್ರಾಧಿಕಾರದ ಮಾಜಿ ಅಧ್ಯಕ್ಷರ ಯೋಜನೆಗಳನ್ನು ಪೂರ್ಣಗೊಳಿಸಲು ಶ್ರಮಿಸುತ್ತೇನೆ' ಎಂದು ಭರವಸೆ ನೀಡಿದರು. ಮಾಜಿ ಸಂಸದ ಸಂಗಣ್ಣ ಕರಡಿ ಮಾತನಾಡಿ,'ನಗರ ಅತ್ಯಂತ ವೇಗವಾಗಿ ಬೆಳೆಯುತ್ತಿದೆ. ಮುಖ್ಯ ರಸ್ತೆ ಹಾಗೂ ವೃತ್ತಗಳ ವಿಸ್ತರಣೆ ಆಗಬೇಕು' ಎಂದು ಹೇಳಿದರು. ಸಂಸದ ಕೆ.ರಾಜಶೇಖರ ಹಿಟ್ನಾಳ ಮಾತನಾಡಿ,'ಜನರ ಸಮಸ್ಯೆಗಳಿಗೆ ಸ್ಪಂದಿಸುವ



ಕೆಲಸ ನಿರಂತರವಾಗಿ ಮಾಡುತ್ತಾ ಬಂದಿರುವ ಸರಳ ವ್ಯಕ್ತಿ ಪ್ರಸನ್ನ ಗಡಾದ ಅವ-ರಿಗೆ ಉತ್ತಮ ಅವಕಾಶ ಸಿಕ್ಕಿದೆ. ಅವರು ಅನುಭವ ಹಾಗೂ ಅವಕಾಶ ಬಳಸಿಕೊಂಡು ನಗರ ಅಭಿವೃದ್ಧಿ ಮಾಡಲಿ' ಎಂದರು.

ಶಾಸಕ ರಾಘವೇಂದ್ರ ಹಿಟ್ನಾಳ, ಮುಖಂಡರಾದ ಅಮ್ಜದ್ ಪಟೇಲ್, ಕಾಟನ್ ಪಾಷಾ, ಕೆ.ಎಂ.ಸೈಯದ್, ವಿ.ಆರ್.ಪಾಟೀಲ, ಕೃಷ್ಣ ಇಟ್ಟಂಗಿ ಸೇ-ರಿದಂತೆ ಅನೇಕರು ಪಾಲ್ಗೊಂಡಿದ್ದರು. ಸಿಕ್ಕ ಅವಧಿಯಲ್ಲಿ ಆದಷ್ಟು ಕೆಲಸ: ಗುಪ್ತಾ 'ನನಗೆ ಸಿಕ್ಕ ಅವಧಿಯಲ್ಲಿ ನಗರದ ಅಭಿವೃದ್ಧಿಗೆ ಹಲವು ಯೋಜನೆಗಳನ್ನು ಕೈಗೊಂಡಿದ್ದು ಯೋಜನೆಗಳು ಅನುಮೋದನೆ ಪಡೆದು ಡಿಪಿಆರ್ ಹಂತದಲ್ಲಿವೆ. ಶೀಘ್ರ ಟೆಂಡರ್ ಆಗಲಿವೆ' ಎಂದು ನಗರಾಭಿವೃದ್ಧಿ ಪ್ರಾಧಿಕಾರದ ನಿರ್ಗಮಿತ ಅಧ್ಯಕ್ಷ ಶ್ರೀನಿವಾಸ ಗುಪ್ತಾ ಹೇಳಿದರು. 'ಕಾಂಗ್ರೆಸ್ ಪಕ್ಷ ನೀಡಿದ್ದ ಅವಕಾಶದಲ್ಲಿ ಜನಸೇವೆ ಮಾಡಿರುವೆ. ಕಿನ್ನಾಳ ರಸ್ತೆಯ ಬಸವೇಶ್ವರ ಸರ್ಕಲ್ ಅಭಿವೃದ್ಧಿಗೆ ಚಾಲನೆ ನೀಡಲಾಗಿದೆ' ಎಂದರು.

# ಜಿಲ್ಲೆಯಲ್ಲಿ ದಲಿತ ಸಾಹಿತ್ಯ ಪರಿಷತ್ತು ಸಮ್ಮೇಳನ ಯಶಸ್ವಿ ಗಣ್ಯರಿಗೆ ಪತ್ರಕರ್ತರಿಗೆ ಸನ್ಮಾನ

❑ ನೈಜ್ಯ ದೆಸೆ ನ್ಯೂಸ್

ನಗರದ ಸರ್ಕಾರಿ ನೌಕರರ ಭವನದಲ್ಲಿ ಸೋಮವಾರ ಸಂಜೆ ದಲಿತ ಸಾಹಿತ್ಯ ಪರಿಷತ್ತು ತಾಲೂಕು ಘಟಕ ಹಾಗೂ ಯುವ ಘಟಕದಿಂದ ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘ ತಾಲೂಕು ಘಟಕಕ್ಕೆ ಆಯ್ಕೆಯಾದ ನೂತನ ಪದಾಧಿಕಾರಿಗಳಿಗೆ ಹಾಗೂ 11ನೇ ಅಖಿಲ ಭಾರತ ದಲಿತ ಸಾಹಿತ್ಯ ಸಮ್ಮೇಳನ ಯಶಸ್ವಿಗೆ ಕಾರಣರಾದ ಗಣ್ಯರಿಗೆ ಅಭಿನಂದನಾ ಸಮಾರಂಭ ಹಮ್ಮಿಕೊಂಡು ಅಭಿನಂದಿಸಲಾಯಿತು.

ನಂತರ ತಾಲೂಕು ಘಟಕದ ಅಧ್ಯಕ್ಷ ಡಾ.ಹುಸೇನಪ್ಪ ಅಮರಾಪುರ ಮಾತನಾಡಿ, ದಲಿತ ಸಾಹಿತ್ಯ ಪರಿಷತ್ತು 30 ವರ್ಷಗಳಿಂದ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅನೇಕ ಸಾಹಿತ್ಯ, ಸಾಂಸ್ಕೃತಿ-ಕ, ಸಂವಾದ, ಚರ್ಚಾಗೋಷ್ಠಿಗಳ ಜೊತೆಗೆ ಜಿಲ್ಲಾ, ತಾಲೂಕು ಮತ್ತು ಅಖಿಲ ಭಾರತ ದಲಿತ ಸಾಹಿತ್ಯ ಸಮ್ಮೇಳನ ಆಯೋಜಿಸುತ್ತಾ ಬಂದಿದೆ. ಕಾರಣ



ಜಿಲ್ಲೆಯ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಡಿಸೆಂಬರ್ 20 ಮತ್ತು 21ರಂದು ಎರಡು ದಿನಗಳ ಕಾಲ 11ನೇ ಅಖಿಲ ಭಾರತ ದಲಿತ ಸಾಹಿತ್ಯ ಸಮ್ಮೇಳನ ಆಯೋಜಿಸಲಾಗಿತ್ತು. ಸಮ್ಮೇಳನದಲ್ಲಿ ಸಿಂಧನೂರು ತಾಲೂಕಿನಲ್ಲಿ ಅನೇಕ ಪ್ರಗತಿಪರರು,ಬುದ್ಧಿಜೀವಿಗಳು,ವಿವಿಧ ಮುಖಂಡರು, ಸಮ್ಮೇಳನದ ಯಶಸ್ವಿಗೆ ಕಾರಣರಾಗಿದ್ದರು. ಅಲ್ಲದೇ ಹಲವಾರು ಜನರು ಸಮ್ಮೇಳನದಲ್ಲಿ ಗೋಷ್ಠಿ ಮತ್ತು ಇತರೆ ಗೌರವ ಸನ್ಮಾನಗಳಿಗೆ ಪಾತ್ರರಾಗಿದ್ದರು. ಈ ಎಲ್ಲಾ ಸಂಗತಿಗಳನ್ನು ಗಮನಿಸಿ ಮಹನೀಯರಿಗೆ ಸನ್ಮಾನಿಸಲಾಗಿದೆ ಎಂದರು.

ದಲಿತ ಸಾಹಿತ್ಯ ಪರಿಷತ್ತು ಜಿಲ್ಲಾ ಘಟಕದ ಉಪಾಧ್ಯಕ್ಷ ಡಾ.ಬಸವರಾಜ ಪಿ.ನಾಯಕ ಮಾತನಾಡಿ, ದಲಿತ ಸಾಹಿತ್ಯ ಪರಿಷತ್ತಿನ ವಾರ್ಷಿಕ ಚಟುವಟಿಕೆಗಳನ್ನು ವಿವರಿಸುವುದರ ಜೊತೆಗೆ ತಾಲೂಕು ಘಟಕಕ್ಕೆ ನೂತನವಾಗಿ ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ಆಯ್ಕೆಯಾದ ಪದಾಧಿಕಾರಿಗಳಿಗೆ ಅಭಿನಂದಿಸುವುದು ನಮ್ಮ ಪರಿಷತ್ತಿನ ಜವಾಬ್ದಾರಿಯಾಗಿತ್ತು. ಈ ನಿಟ್ಟಿನಲ್ಲಿ ಅವರನ್ನು ಅಭಿನಂದಿಸಿಲಾಯಿತು ಎಂದರು. ಪ್ರಧಾನ ಕಾರ್ಯದರ್ಶಿ ರಾಮಣ್ಣ ಹಿರೇಬೇರ್ಗಿ, ಖಜಾಂಚಿ ಶರಣಪ್ಪ ಹೊಸಳ್ಳಿ, ಹಿರಿಯ ಉಪಾಧ್ಯಕ್ಷ ಹೆಚ್.ಎಫ್.ಮಸ್ಕಿ, ಡಾ.ಅರುಣಕುಮಾರ ಭೇರ್ಗಿ, ಡಾ.ಮದಗಪ್ಪ ಭಂಡಾರಿ, ಆಂಜನೇಯ ರಾಮತ್ನಾಳ್, ಶರೀಫ್ ಹಸಮಕಲ್, ಪತ್ರಕರ್ತರಾದ ನಾಗರಾಜ ಬೊಮ್ಮನಾಳ, ಹನುಮಂತ, ವೀರೇಶ ಕನ್ನಾರಿ, ಡಾ.ಕೆ.ಖಾದರ್ ಭಾಷಾ, ಡಾ.ವೆಂಕಟನಾರಾಯಣ,

ಮಂಜುನಾಥ ಸೋಮಲಾಪುರ, ನಿವೃತ್ತ ಪ್ರಾಂಶುಪಾಲ ಶಿವಯ್ಯ ಹಿರೇಮಠ, ಆಪ್ತಮಿತ್ರ ಸಹಕಾರಿಯ ಸಿಇಓ ಬಸವರಾಜ ಬಿರಾದಾರ್, ನೊಬೆಲ್ ಕಾಲೇಜಿನ ಅಧ್ಯಕ್ಷ ಪರಶುರಾಮ ಮಲ್ಲಾಪುರ, ಈಶ್ವರ ಹಲಗಿ, ಮೆಹಬೂಬ್ ರೌಡಕುಂದ, ನೂರ್ ಮಹಮ್ಮದ್, ಬಿ.ರವಿಕುಮಾರ ಸಾಸಲಮರಿ, ವೆಂಕಟೇಶ ಬುಕ್ಕನಟ್ಟಿ, ಶಿವರಾಜ ಅಡಗಲ್, ಕಾಳಿಂಗಪ್ಪ ಆಯನೂರು, ರಾಮಣ್ಣ ರೈತನನಗರ ಕ್ಯಾಂಪ್, ಮುರಾರ್ಜಿ ಶಾಲಾ ಪ್ರಾಚಾರ್ಯರು, ಬಸವರಾಜ ಎಲ್ ಚಿಗರಿ, ಜಮಾಅತೆ ಇಸ್ಲಾಂ ತಾಲೂಕು ಅಧ್ಯಕ್ಷ ಹುಸೇನ್ ಸಾಬ್, ಹೊನ್ನೂರ ಕಟ್ಟಿಮನಿ, ದ್ಯಾಮಣ್ಣ ಚಿಕ್ಕಭೇರ್ಗಿ, ಸೇರಿದಂತೆ ಅನೇಕ-ರಿದ್ದರು. ಈ ಕಾರ್ಯಕ್ರಮವನ್ನುಬಯುವ ಘಟಕದ ಅಧ್ಯಕ್ಷ ತಿಮ್ಮಪ್ಪ ಕಲ್ಮಂಗಿ ಸ್ವಾಗತಿಸಿದರು. ದುರಗಪ್ಪ ಗುಡದೂರು ನಿರೂಪಿಸಿ ವಂದಿಸಿದರು.

## ಸಾಹಿತ್ಯ ಸಿಂಚನ

ತ್ರಿವಿಧ ದಾಸೋಹಿ ಶಿವಕುಮಾರ ಸ್ವಾಮಿಗಳು

ಈಶನ ಶಕ್ತಿಯ ಪಡೆದು ಬಂದವರು ತುಮಕೂರಿನಲ್ಲಿ
ನೆಲೆಸಿದರು ಅವತಾರಪುರುಷ, ತ್ರಿವಿಧ ದಾಸೋಹಿಯು ನವ
ಕ್ರಾಂತಿಯನ್ನೇ ಮಾಡಿದರು !!1!!

ದೀನರ ಬದುಕಿಗೆ ಬೆಳಕಾದವರು ಸಿದ್ದಗಂಗಾ ಮಠದ
ಕಲಶವಾದರು ಬೆಟ್ಟದ ಮೇಲಿಂದ ಗಂಗೆಯನೇ ಹರಿಸುತ
ಹಸಿರು ಲೋಕವನೇ ಸೃಷ್ಟಿಸಿದರು !!2!!

ಬಸವಣ್ಣನ ವಚನಗಳ ಪಾಲಿಸಿದವರು ಧರ್ಮಯೋಗಿಯು,
ಕರ್ಮಯೋಗಿಯು ಇಚ್ಛೆಯಂತೆ ಶಿವನ ಸೇವೆಗೈಯುತ
ಶತಾಯುಷಿಯಾಗಿ ಬಾಳಿದವರು !!!!

ಜಾತಿ ಮತದ ಬೇಧವ ತೋರದೇ ಸರ್ವರಿಗೂ ಆಶ್ರಯ
ನೀಡಿದವರು ಸಾತ್ವಿಕ ಜೀವನ, ನಗುಮೊಗದಿಂದ ವಾಠ
ಪ್ರವಚನವ ನೀಡಿದರು !!4!!

ಸಾರ್ಥಕ ಜೀವನ ನಡೆಸಿದವರು ಮಕ್ಕಳ ಪಾಲಿನ
ಮಮತಾಮಯಿಯು ಶಿಸ್ತಿನ ಪಾಠವ ಕಲಿಸುತ ಸಕಲರಿಗೂ
ಶಿವನ ಪಾದವ ಸೇರಿದರು !!5!!

ಎನಿತು ಹೇಳಿದರೂ ಕಡಿಮೆಯೇ

ಶ್ರೀಗಳ ಬಗೆಗೆ ಅರಿವುದು ಹೇಗೆ?! ಸಾಸಿವೆ ಕಾಳಿನಷ್ಟು
ಶ್ರೀರಕ್ಷೆ ಇರಲಿ ನಮ್ಮಂತಹ ಭಕುತರ ಮೇಲೆ !!6!!

ಸಿಂಧು ಭಾರ್ಗವ, ಬೆಂಗಳೂರು

## ಜಿಲ್ಲಾಡಳಿತದಿಂದ ಇಂದು ನಿಜಶರಣ ಅಂಬಿಗರ ಚೌಡಯ್ಯ ಜಯಂತಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 20 (ಕರ್ನಾಟಕ ವಾರ್ತೆ): ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ನಿಜಶರಣ ಅಂಬಿಗರ ಚೌಡಯ್ಯ ಜಯಂತಿ ಕಾರ್ಯಕ್ರಮವು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜನವರಿ 21ರ ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ.**

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು. ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಬಾಗಿಯಾಗಲಿದ್ದಾರೆ. ಗಂಗಾಮತಸ್ಥ ಸಮಾಜದ ಜಿಲ್ಲಾಧ್ಯಕ್ಷರಾದ ಕೆ.ಶಾಂತಪ್ಪ ಅವರು ನಿಜಶರಣ ಅಂಬಿಗರ ಚೌಡಯ್ಯ ಜಯಂತಿ ಕುರಿತು ಉಪನ್ಯಾಸ ನೀಡಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಮಕ್ಕಳ ಭವಿಷ್ಯ ರೂಪಿಸುವ ನಿಟ್ಟಿನಲ್ಲಿ ಶಿಕ್ಷಣ ಸಂಸ್ಥೆ ಸ್ಥಾಪನೆ ಡಾ. ಎ.ಎಂ. ಮುಲ್ಲಾ

ನೈಜ್ಯ ದೆಸೆ ನ್ಯೂಸ್



**ಮುದ್ದೇಬಿಹಾಳ: ಮಕ್ಕಳ ಭವಿಷ್ಯದ ಹಿತದೃಷ್ಟಿಯಿಂದ ನಮ್ಮಿಂದಾಗುವ ಎಲ್ಲಾ ಒಳ್ಳೆಯ ಕಾರ್ಯಗಳನ್ನು ಮಾಡುವ ಸಂಕಲ್ಪದೊಂದಿಗೆ, ತಂದೆಯವರ ಕನಸನ್ನು ಸಾಕಾರಗೊಳಿಸಲು 'ದಿ ಆರ್ಕ್ ಎಂಜಲ್ ಆಂಗ್ಲ ಮಾಧ್ಯಮ ಶಾಲೆ'ಯನ್ನು ಸ್ಥಾಪಿಸಲಾಗಿದೆ ಎಂದು ಸಂಸ್ಥೆಯ ಅಧ್ಯಕ್ಷರಾದ ಡಾ. ಎ.ಎಂ. ಮುಲ್ಲಾ ಹೇಳಿದರು.**

ಪಟ್ಟಣದ ಹೊರವಲಯದ ಕವಡಿಮಟ್ಟಿ ಗ್ರಾಮದಲ್ಲಿರುವ ಆರ್ಕ್ ಎಂಜಲ್ ಆಂಗ್ಲ ಮಾಧ್ಯಮ ಪ್ರಾಥಮಿಕ ಶಾಲೆಯ 11ನೇ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಶಾಲೆಯ ಆಡಳಿತ ಮಂಡಳಿ ಹಾಗೂ ಸಿಬ್ಬಂದಿಯು ಪ್ರಾಮಾಣಿಕತೆಯಿಂದ ಸಲ್ಲಿಸುತ್ತಿರುವ ಸೇವೆಯ ಫಲವಾಗಿ ವಿದ್ಯಾರ್ಥಿಗಳು ಗುಣಮಟ್ಟದ ಶಿಕ್ಷಣ ಪಡೆಯುತ್ತಿದ್ದಾರೆ. ಶಾಲೆಗೆ ಅಗತ್ಯವಿರುವ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಒದಗಿಸಿರುವ ಕಾರಣ ಇಂದು ಸಂಸ್ಥೆ ನಿರಂತರ ಪ್ರಗತಿಯತ್ತ ಸಾಗುತ್ತಿದೆ. ಮುಂದಿನ ದಿನಗಳಲ್ಲಿ ಈ ಶಿಕ್ಷಣ ಸಂಸ್ಥೆ ತಾಲೂಕು ಮಟ್ಟದಲ್ಲಿ ಉತ್ತಮ ಹೆಸರು ಗಳಿಸಬೇಕೆಂದು ಸಿಬ್ಬಂದಿಗೆ ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕ್ಷೇತ್ರ ಶಿಕ್ಷಣಾಧಿಕಾರಿ ಬಸವರಾಜ ಸಾವಳಗಿ ಮಾತನಾಡಿ, ಈ ಸಂಸ್ಥೆಯ ವಿದ್ಯಾರ್ಥಿಗಳ ಬುದ್ಧಿವಂತಿಕೆ ಹಾಗೂ ವಸ್ತು ಪ್ರದರ್ಶನಗಳು ಅತ್ಯುತ್ತಮವಾಗಿವೆ. ಶಿಕ್ಷಕರ ಕಾರ್ಯ ವೈಖರಿ ಶ್ಲಾಘನೀಯವಾಗಿದೆ.

ಶಿಕ್ಷಣದ ಅಭಿವೃದ್ಧಿಯಿಂದಲೇ ದೇಶದ ಪ್ರಗತಿ ಸಾಧ್ಯ. ಇಲ್ಲಿ ದೊರೆಯುತ್ತಿರುವ ಉತ್ತಮ ಶಿಕ್ಷಣದ ಸದುಪಯೋಗ ಪಡೆದು ಮಕ್ಕಳು ಜೀವನದಲ್ಲಿ ಸಾಧನೆ ಮಾಡಬೇಕು. ಆಡಳಿತ ಮಂಡಳಿಯ ಪ್ರಾಮಾಣಿಕ ಪ್ರಯತ್ನದಿಂದ ಶಾಲೆ ಇಂದು ಹೆಮ್ಮರವಾಗಿ ಬೆಳೆದಿದ್ದು, ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಮಟ್ಟದಲ್ಲಿ ಮಕ್ಕಳಿಗೆ ಶಿಕ್ಷಣ ನೀಡುವಂತಾಗಲಿ ಎಂದು ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಶಿಕ್ಷಕಿ ಸುಜಾತಾ ಬೋಸ್ಲೆ ಅವರು ಶಾಲೆಗೆ 30,000 ದೇಣಿಗೆಯನ್ನು ನೀಡಿದರು.

ಕಾರ್ಯಕ್ರಮದಲ್ಲಿ ಪಿಂಟು ಸಾಲಿಮನಿ, ಪರಿದಾಬೇಗಂ ಭಾಗವಾನ್, ಅಲ್ಲಾಬಕ್ಷ ನಾಯ್ಕೋಡಿ, ದೈಹಿಕ ಶಿಕ್ಷಣಾಧಿಕಾರಿ ಎ.ಜಿ. ದಖನಿ, ಸಿಆರ್ಪಿ ಸರಸ್ವತಿ ವಡವಡಗಿ, ಬೀಬಿ ಆಯೀಶಾ ನಾಲತವಾಡ, ಆಯೀಶಾ ಅವಟಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಮಕ್ಕಳಿಂದ ಜರುಗಿದ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ಪಾಲಕರು ಹಾಗೂ ಸಾರ್ವಜನಿಕರನ್ನು ಮನರಂಜಿಸಿವೆ. ಶಿಕ್ಷಕಿ ಆಯೀಶಾ ಅವಟಿ ಕಾರ್ಯಕ್ರಮವನ್ನು ನಿರೂಪಿಸಿದರು. ಶಾಲಾ ಸಿಬ್ಬಂದಿ, ನೂರಾರು ಪಾಲಕರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಬಳ್ಳಾರಿ ಜಿಲ್ಲೆಯಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಮೂರ್ತಿ ಅನಾವರಣ ನೆನೆಗುದಿಗೆ



ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ ಜಿಲ್ಲೆಯಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಮೂರ್ತಿ ಅನಾವರಣ ನೆನೆಗುದಿಗೆ ಬಿದ್ದ ಕಾರಣವಾಗಿ ಇಂದು ಕವಿತಾಳ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯನ್ನ ಹಮ್ಮಿಕೊಳ್ಳಲಾಗಿತ್ತು.**

ಈ ಸಂದರ್ಭದಲ್ಲಿ ಮಾತನಾಡಿದ ಅಖಿಲ ಕರ್ನಾಟಕ ಮಹರ್ಷಿ ವಾಲ್ಮೀಕಿ ಮಹಾಸಭಾ ಉಪಾಧ್ಯಕ್ಷರಾದ ಭೀಮಣ್ಣ ನಾಯಕ್ ಕಾಚಾಪುರ್ ಬಳ್ಳಾರಿ ಜಿಲ್ಲಾಯಲ್ಲಿ ಮಾಜಿ ಸಚಿವರು ಹಾಲಿ ಶಾಸಕರು ಎಲ್ಲರೂ ಇದ್ದರೂ ಸಹ ಅಲ್ಲಿ ಅವಮಾನವಾಗಿರುವುದು ನಮ್ಮ ಆದಿಕವಿ ಮಹರ್ಷಿ ವಾಲ್ಮೀಕಿ ಅವರಿಗೆ ಇಂತಹ ದೊಡ್ಡ ಆಘಾತ ನಡೆದರೂ ಸಹ ಈ ಸಮಾಜದ ಮುಖಂಡರು ಪಾರ್ಟಿ ಅವರು ಯಾರೊಬ್ಬರೂ ಸಹ ಮಾತನಾಡದೇ ಇರುವುದು ತುಂಬಾ ವಿಷದನೀಯ ಸಂಗತಿ. ಸಮಾಜದ ಹೆಸರಿನಲ್ಲಿ ಹಲವಾರು ಸಂಘಟನೆಗಳನ್ನು ಕಟ್ಟಿ, ಸಮಾಜದ ಸೌಲತ್ತುಗಳನ್ನು ತೆಗೆದುಕೊಂಡು ಈಗ ಇಂತಹ ಸಮಯದಲ್ಲಿ ಮೌನವಾಗಿರುವುದೇಕೆ? ನೀವೇನಾದರೂ ಪಾರ್ಟಿ ಗುಲಾಮರೆ? ಎಲ್ಲಿ ನಿಮ್ಮ ಹೋರಾಟನ ಸಮಾಜ ಎಂದು ಬೊಬ್ಬೆ ಇಡುವ ಹೋರಾಟಗಾರರೇ ಎಲ್ಲಿ ಬನ್ನಿ ಹೊರಡೋಣ ಸಮಾಜದ ಮುಖಂಡರೇ ಬನ್ನಿ ಪಾರ್ಟಿ ಬಿಟ್ಟು ಬನ್ನಿ ಬಳ್ಳಾರಿ ಮೂರ್ತಿಯನ್ನು ಸಮಾಜ ವತಿಯಿಂದ ಯಶಸ್ವಿಗೊಳಿಸೋಣ.

2026 ಫೆಬ್ರವರಿ 5 .8. 9ರಂದು ರಾಜನಹಳ್ಳಿ ವಾಲ್ಮೀಕಿಯವರ ಜಾತ್ರೆ ಇರುವ ಕಾರಣ ಜಾತ್ರೆಯೊಳಗೆ ಬಳ್ಳಾರಿಯಲ್ಲಿ ಮೂರ್ತಿ ಅನಾವರಣ ಆಗಬೇಕು. ಇಲ್ಲದಿದ್ದರೆ ಉಗ್ರವಾದ ಹೋರಾಟ ಮಾಡುವುದಾಗಿ ಹೇಳಿಕೆಯನ್ನು ನೀಡಿದ್ದಾರೆ. ಭೀಮಣ್ಣ ನಾಯಕ್ ಕಚಾಪುರ್ ರಾಯಚೂರು ಜಿಲ್ಲೆಯಾದ್ಯಂತ ಸುಮಾರು 5000ಕ್ಕೂ ಅಧಿಕ ಪ್ರಕರಣಗಳನ್ನು ಇತ್ಯರ್ಥಪಡಿಸಿದ್ದೇನೆ ಹಾಗೂ ಜಿಲ್ಲೆಯಾದ್ಯಂತ 180ಕ್ಕೂ ಅಧಿಕ ಸಂಘಟನೆಗಳನ್ನ ಪ್ರತಿಷ್ಠಾಪಿಸಿದ್ದೇನೆ.

ಜಿಲ್ಲೆಯಾದ್ಯಂತ 30ಕ್ಕೂ ಹೆಚ್ಚು ವಾಲ್ಮೀಕಿ ಮಹರ್ಷಿಯವರ ಮೂರ್ತಿಯನ್ನು ಅನಾವರಣ ಮಾಡಿದ್ದೇನೆ ಅಂತ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಅಖಿಲ ಕರ್ನಾಟಕ ಮಹರ್ಷಿ ವಾಲ್ಮೀಕಿ ಮಹಾಸಭಾ ಉಪಾಧ್ಯಕ್ಷರಾದ ಭೀಮನಾಯಕಚಪುರ್ ವೆಂಕನಗೌಡ ನಾಯಕ್ ಮಲದಗುಡ್ಡ ಗ್ರಾಮ ಘಟಕದ ಅಧ್ಯಕ್ಷರು ಬಸವರಾಜ್ ನಾಯಕ್ ಮಲ್ಲದಗುಡ್ಡ ಗ್ರಾಮದ ಘಟಕ ಉಪಾಧ್ಯಕ್ಷರು ಹಾಗೂ ಚೆನ್ನಪ್ಪ ನಾಯಕರು ಉಪಸ್ಥಿತರಿದ್ದರು.

# ಮಹಾಯೋಗಿ ವೇಮನರ ತತ್ವ ಆದರ್ಶ ಪಾಲಿಸಿ: ಡಾ.ಶಿವರಾಜ ಎಸ್.ಪಾಟೀಲ

ನೈಜ್ಯ ದೆಸೆ ನ್ಯೂಸ್



**ಸಾಮಾನ್ಯ ಜೀವನ ನಡೆಸಿದ ಮಹಾಯೋಗಿ ವೇಮನರ ಜೀವನ ಆದರ್ಶಗಳನ್ನು ಪ್ರತಿಯೊಬ್ಬರು ಪಾಲನೆ ಮಾಡಬೇಕು' ಎಂದು ನಗರ ಕ್ಷೇತ್ರದ ಶಾಸಕ ಡಾ.ಶಿವರಾಜ ಪಾಟೀಲ ಹೇಳಿದರು. ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗ ಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ರಾಯಚೂರು ಮಹಾನಗರಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆಶ್ರಯದಲ್ಲಿ ಏರ್ಪಡಿಸಿದ್ದ ಮಹಾಯೋಗಿ ವೇಮನ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.'ಮಹನೀಯರ ಜಯಂತಿಗಳು ಕೇವಲ ಆಚರಣೆಗೆ ಸೀಮಿತವಾಗಬಾರದು.**

ಅವರ ತತ್ವ ಆದರ್ಶಗಳನ್ನು ಪ್ರತಿಯೊಬ್ಬರು ಪಾಲನೆ ಮಾಡಬೇಕು. ಅಂದಾಗ ಜಯಂತಿಗಳ ಆಚರಣೆಗೆ ಮಹತ್ವ ಬರುತ್ತದೆ' ಎಂದು ತಿಳಿಸಿದರು. 'ರೆಡ್ಡಿ ಸಮಾಜದ ಬಂಧುಗಳ ಬೇಡಿಕೆಯಂತೆ ಸಿ.ಎ. ನಿವೇಶನ ಕೊಡಲಾಗಿದೆ. ಬರುವ ದಿನಗಳಲ್ಲಿ ವೇಮನ ಮಂದಿರ ನಿರ್ಮಾಣವಾಗಲಿದೆ. ವೇಮನ ಸಮುದಾಯ ಭವನ ನಿರ್ಮಾಣಕ್ಕೆ ? 10 ಲಕ್ಷ ಕೊಡಲಾಗುವುದು' ಎಂದು ಭರವಸೆ ನೀಡಿದರು. ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಮಾತನಾಡಿ, 'ಮಹಾಯೋಗಿ ವೇಮನರು ಆಧ್ಯಾತ್ಮಿಕ ಜೀವನಕ್ಕೆ ಬರಲು ಹೇಮರೆಡ್ಡಿ ಮಲ್ಲಮ್ಮ ಅವರು ಕಾರಣರಾದರು. ಸಮಾಜದ ಏಳಿಗೆಗೆ ಅವರು ಶ್ರಮಿಸಿದ್ದು, ಎಲ್ಲ ಭಾರತೀಯರು ಸೇರಿ ವೇಮನ ಜಯಂತಿ ಆಚರಣೆ ಮಾಡಬೇಕು. ಹೇಮರೆಡ್ಡಿ ಮಲ್ಲಮ್ಮ ಹಾಗೂ ಮಹಾಯೋಗಿ ವೇಮನ ಆಚಾರ, ವಿಚಾರಗಳನ್ನು ಇಂದಿನ ಪೀಳಿಗೆಗೆ ತಿಳಿಸುವ ಕಾರ್ಯ ನಮ್ಮೆಲ್ಲರಿಂದ ಆಗಬೇಕು' ಹೇಳಿದರು.

'ಸಾಮಾಜಿಕ ಸಮಸ್ಯೆ ಮತ್ತು ಪಿಡುಗುಗಳ ನಿವಾರಣೆಯಲ್ಲಿ ಹಲವಾರು ಶ್ರೇಷ್ಠ ದಾರ್ಶನಿಕರು, ಸಂತರು, ಶರಣರು ಮಹತ್ವದ ಪಾತ್ರವಹಿಸಿದ್ದು, ಅದರಲ್ಲಿ ವೇಮನರ ಕೊಡುಗೆ ಗಮನಾರ್ಹವಾಗಿದೆ' ಎಂದರು. ಕಲಬುರಗಿ ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಜಿಲ್ಲಾ ಘಟಕ ಅಧ್ಯಕ್ಷ ಮಹಿಪಾಲರೆಡ್ಡಿ ಉಪನ್ಯಾಸ ನೀಡಿದರು. ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ: ಅತಿಹೆಚ್ಚು ಅಂಕಗಳನ್ನು ಗಳಿಸಿದ ವಿದ್ಯಾರ್ಥಿಗಳಾದ ಸ್ಫೂರ್ತಿ ನರಸಿಂಹ ರೆಡ್ಡಿ, ಸಾಯಿ ರಘುಪತಿ ರೆಡ್ಡಿ, ಆಕಾಂಕ್ಷಾ ಪ್ರಕಾಶ ರೆಡ್ಡಿ, ಅನನ್ಯ ವಿಕ್ರಮ ರೆಡ್ಡಿ, ಕೀರ್ತಿ ಪ್ರಾಣೇಶ ರೆಡ್ಡಿ ಅವರನ್ನು ಸನ್ಮಾನಿಸಲಾಯಿತು.

ಕಚೇರಿಯ ತಹಶೀಲ್ದಾರ್ ಜಗದೀಶ, ಮಹಾನಗರ ಪಾಲಿಕೆಯ ಸಮಿತಿ ಕಾರ್ಯದರ್ಶಿ ಹಾಗೂ ಸರಕಾರಿ ನೌಕರರ ಸಂಘದ ಅಧ್ಯಕ್ಷ ಕೃಷ್ಣ ಶಾವಂತಗೇರಾ, ಜಿಲ್ಲಾ ಆಯುಷ್ ಅಧಿಕಾರಿ ಡಾ.ಶಂಕರಗೌಡ ಎಸ್.ಪಾಟೀಲ, ಸಮಾಜದ ಮುಖಂಡರಾದ ಜಿ.ರಾಮಚಂದ್ರ ರೆಡ್ಡಿ, ಅಚ್ಚುತ್ ರೆಡ್ಡಿ, ಡಾ.ಭೀಮನಗೌಡ, ಚಂದ್ರಶೇಖರ ರೆಡ್ಡಿ, ಭೀಮೇಶ್ ನಾಯ್ಕ, ರಾಮನಗೌಡ ಏಗನೂರು, ಕೇಶವ ರೆಡ್ಡಿ, ದಂಡಪ್ಪ ಬಿರಾದಾರ ಉಪಸ್ಥಿತರಿದ್ದರು.

# ಪುಸ್ತಕಗಳ ಜ್ಞಾನವಿಲ್ಲದೇ ಹೋಗಿದ್ದರೆ ಜಗತ್ತು ಕತ್ತಲಿನಲ್ಲಿರುತ್ತಿತ್ತು :ಕುಲಪತಿ ಪ್ರೊ.ಶಿವಾನಂದ



ನೈಜ್ಯ ದೆಸೆ ನ್ಯೂಸ್

**ರಾಯಚೂರು: 'ಪುಸ್ತಕಗಳ ಜ್ಞಾನವಿಲ್ಲದೇ ಹೋಗಿದ್ದರೆ ಜಗತ್ತು ಕತ್ತಲಿನಲ್ಲಿರುತ್ತಿತ್ತು. ಪುಸ್ತಕಗಳು ಹೊಸ ತಲೆ ತಲೆಮಾರುಗಳಿಗೆ ಕೊಂಡೊಯ್ಯುವ ಹಾಗೂ ಜಗತ್ತಿನ ಎಲ್ಲಾ ಜ್ಞಾನವನ್ನು ತಿಳಿಸುವ ಜ್ಞಾನ ದೀವಿಗೆಗಳಾಗಿವೆ' ಎಂದು ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಶಿವಾನಂದ ಕೆಳಗಿನಮನಿ ಅಭಿಪ್ರಾಯಪಟ್ಟರು.**

ಇಲ್ಲಿನ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗ ಮಂದಿರದ ಆವರಣದಲ್ಲಿ ಭಾನುವಾರ ಕಲಾ ಸಂಕುಲ ಸಂಸ್ಥೆಯಿಂದ ಆಯೋಜಿಸಿದ್ದ 'ಪುಸ್ತಕ ಸಂತೆ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಪುಸ್ತಕಗಳು ಪ್ರತಿಯೊಬ್ಬರಿಗೂ ಆಪ್ತ ಗೆಳೆಯನಿದ್ದಂತೆ, ಜ್ಞಾನದ ಭಂಡಾರವಾಗಿವೆ. ಪೀಳಿಗೆಯಿಂದ ಪೀಳೆಗೆಗೆ ಜ್ಞಾನವನ್ನು ಧಾರೆ ಎರೆಯುತ್ತವೆ. ಆಯಾ ಕಾಲದ ಚರಿತ್ರೆಯನ್ನು ವಿವರಿಸುತ್ತವೆ. ಜಾಗತಿಕ ಮಟ್ಟದ ಜ್ಞಾನ, ಸಂಸ್ಕಾರ ಮತ್ತು ಸಂಸ್ಕೃತಿಯ ಅನಾವರಣಗೊಳಿಸುತ್ತವೆ. ಹೀಗಾಗಿ ಪುಸ್ತಕಗಳು ಮನುಷ್ಯ ಗಳಿಸಿರುವ ಅತ್ಯಂತ ದೊಡ್ಡ ಸಂಪತ್ತಾಗಿದೆ' ಎಂದು ಬಣ್ಣಿಸಿದರು.

'ಮನೆಯಲ್ಲಿ ಪುಸ್ತಕಗಳಿದ್ದರೆ ಸಂಸ್ಕಾರ ನೆಲೆಯೂರುತ್ತದೆ. ಮಕ್ಕಳಲ್ಲಿ ಉತ್ತಮ ನಡುವಳಿಕೆಗಳು ಬೆಳೆಯುತ್ತವೆ. ಇಂದಿನ ಯುವ ಪೀಳಿಗೆ ಪುಸ್ತಗಳನ್ನು ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು. ಜ್ಞಾನ ಮುಂದಿನ ತಲೆಮಾರುಗಳಿಗೆ ಹಂಚಿಹೋಗಬೇಕು. ಪುಸ್ತಕ ಸಂತೆ ಎಂಬ ಕಾರ್ಯಕ್ರಮವನ್ನು ಆಯೋಜನೆ ಮಾಡಿರುವ ಕಲಾ ಸಂಕುಲ ಸಂಸ್ಥೆಯ ಕಾರ್ಯ ಶ್ಲಾಘನೀಯವಾದದ್ದು' ಎಂದು ಹೇಳಿದರು. ಸಾಹಿತಿಗಳಾದ ಅಯ್ಯಪ್ಪಯ್ಯ ಹುಡಾ, ಬಾಬು ಭಂಡಾರಿಗಲ್, ಚಿದಾನಂದ ಸಾಲಿ, ವೆಂಕಟೇಶ ಬೇವಿನಬೆಂಚಿ, ಈರಣ್ಣ ಬೆಂಗಾಲಿ, ಹೋರಾಟಗಾರ ಜಾನ್ ವೆಸ್ಲಿ, ಕಲಾ ಸಂಕುಲ ಸಂಸ್ಥೆಯ ಅಧ್ಯಕ್ಷೆ ರೇಖಾ ಬಡಿಗೇರ,ಕಾರ್ಯಕ್ರಮ ಆಯೋಜಕ ಮಾರುತಿ ಬಡಿಗೇರ, ಕಲಾವಿದ ಅಮರೇಗೌಡ, ಸೈಯದ್ ವಲಿ ಉಪಸ್ಥಿತರಿದ್ದರು.

# ತೊಗರಿ ಕೇಂದ್ರಕ್ಕೆ ಶಾಸಕ ರಾಜುಗೌಡ ಪಾಟೀಲ ಚಾಲನೆ

ನೈಜ್ಯ ದೆಸೆ ನ್ಯೂಸ್



**ತಾಳಿಕೋಟಿ: ತಾಲೂಕಿನ ಅಸ್ಕಿ ಗ್ರಾಮದಲ್ಲಿ ಸರ್ಕಾರದ ಕನಿಷ್ಠ ಬೆಂಬಲ ಬೆಲೆ ಯೋಜನೆ ಅಡಿಯಲ್ಲಿ ಸ್ಥಾಪಿಸಲಾದ ತೊಗರಿ ಖರೀದಿ ಕೇಂದ್ರಕ್ಕೆ ದೇವರ ಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ (ಕು.ಸಾಲವಾಡಗಿ) ಸೋಮವಾರ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಅವರು ಮಾತನಾಡಿ ಒಕ್ಕಲುತನ ಹುಟ್ಟುವಳಿಗಳಿಗೆ ಮಾರುಕಟ್ಟೆಯಲ್ಲಿ ಬೆಲೆಕುಸಿದಾಗ ರೈತರಿಗೆ ಕನಿಷ್ಠ ಬೆಂಬಲ ಬೆಲೆ ಯಾದರೂ ದೊರಕಿಸಿ ಕೊಡಬೇಕೆಂಬ ಉದ್ದೇಶದಿಂದ ಸರ್ಕಾರ ಜಾರಿ ಮಾಡಿದ ಸದರಿ ಯೋಜನೆಯ ಪ್ರಯೋಜನವನ್ನು ನಮ್ಮ ರೈತರು ಪಡೆದುಕೊಳ್ಳಬೇಕು ಎಂದು ತಿಳಿಸಿದರು.**

ಅಸ್ಕಿ ಪಿಕೆಪಿಎಸ್ ಅಧ್ಯಕ್ಷ ಮಡಿವಾಳಪ್ಪ ಕೆ.ಚೌದ್ರಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಇದೇ ಸಂದರ್ಭದಲ್ಲಿ ಶಾಸಕ ರಾಜುಗೌಡ ಪಾಟೀಲಗೆ ಸಂಘದ ವತಿಯಿಂದ ಸನ್ಮಾನಿಸಿ ಗೌರಿಸಲಾಯಿತು. ಈ ಸಮಯದಲ್ಲಿ ಪಿಕೆಪಿಎಸ್ ಉಪಾಧ್ಯಕ್ಷ ಶಂಕ್ರಪ್ಪ ಕೆಳಗಿನಮನಿ, ಮುಖಂಡ ಎಸ್.ಎಸ್.ಪಾಟೀಲ, ಅಸ್ಕಿ ಮಾಜಿ ಗ್ರಾಪಂ ಅಧ್ಯಕ್ಷ ರಾಯಪ್ಪಗೌಡ ಪಾಟೀಲ, ಪಿಕೆಪಿಎಸ್ ಸದಸ್ಯರಾದ ಹಣಮಗೌಡ ಬಿರಾದಾರ, ಮಲ್ಲನಗೌಡ ಕರಿಗೌಡರ, ವಿಶ್ವನಾಥರೆಡ್ಡಿ ಬಿರಾದಾರ, ಶಿವರುದ್ರಪ್ಪ ಮಗದಾಳ, ಬಸವರಾಜ ಬ್ಯಾಕೋಡ, ರುದ್ರಗೌಡ ಸಿ.ಬಿರಾದಾರ, ಎಂ.ಬಿ. ಕೊಣ್ಣೂರ, ಹೇಮಾ ಬಿ.ಯಾಳಗಿ ನಾಗಮ್ಮ ಎನ್.ಬಿರಾದಾರ, ಸಿದ್ದರಾಮಪ್ಪ ವಡಗೇರಿ,ಈರಘಂಟೆಪ್ಪ ದೊಡ್ಡಮನಿ,ಸಿಇಓ ಎಂ.ಎಂ.ತಳವಾರ ಮತ್ತಿತರರು ಇದ್ದರು.

## ನೇಮಕಾತಿ ಪ್ರಕಟಣೆ

ಬೆಂಗಳೂರು ನಗರ ಜಿಲ್ಲೆಯಲ್ಲಿ 2025–26ನೇ ಸಾಲಿನ ಸಾಮಾನ್ಯ ವರ್ಗಾವಣೆಯಿಂದ ಶುಶ್ರೂಷಣಾಧಿಕಾರಿಗಳ ಹುದ್ದೆಗಳು ಖಾಲಿ–ಯಾಗಿರುವುದರಿಂದ ರಾಷ್ಟ್ರೀಯ ಆರೋಗ್ಯ ಅಭಿಯಾನ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ನಿಟ್ಟಿನಲ್ಲಿ ಪ್ರಸ್ತುತ ಖಾಲಿಯಾಗಿರುವ ಶುಶ್ರೂಷಣಾಧಿಕಾರಿಗಳ ಹುದ್ದೆಗಳನ್ನು ಎನ್.ಹೆಚ್.ಎಂ ಯೋಜನೆಯಡಿ ಗುತ್ತಿಗೆ ಆದಾರದ ಮೇಲೆ ನಿಯಾಮಾನುಸಾರ ಮೇರಿಟ್ ಕಮ್ ರೋಸ್ಟರ್ ಅನ್ವಯ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳನ್ನು ನೇರ ಸಂದರ್ಶನಕ್ಕೆ ಆಹ್ವಾನಿಸಲಾಗಿದೆ. ಮಾನ್ಯತೆ ಪಡೆದ ನರ್ಸಿಂಗ್ ಶಾಲೆಯಲ್ಲಿ ಜಿಎನ್ಎಂ / ಬಿಎಸ್ಸಿ ವಿದ್ಯಾರ್ಹತೆ ಹಾಗೂ ಕೆ–ಎನ್‌ಸಿ ನೋಂದಣಿ ಹೊಂದಿ 18,714/– 55 ಕಂಪ್ಯೂಟರ್ ಸಾಕ್ಷರತೆ ಹೊಂದಿರಬೇಕು. (ಮಹಿಳಾ ಅಭ್ಯರ್ಥಿಗಳು ಮಾತ್ರ) 45 ಒಳಗಿರ ತಕ್ಕದ್ದು ಸಾ.ಆಸ್ಪತ್ರೆ ಆನೇಕಲ್–2 ಸಿ ವಿ ರಾಮನ್ ಆಸ್ಪತ್ರೆ–8 ಕೆ ಸಿ ಜನರಲ್ ಆಸ್ಪತ್ರೆ–21 ಸಾ.ಆಸ್ಪತ್ರೆ ಜಯನಗರ–19 ಸಾ.ಆಸ್ಪತ್ರೆ ಕೆ ಆರ್ ಪುರಂ–3 ಸಾ.ಆಸ್ಪತ್ರೆ ಯಲಹಂಕ–2 :27–01–2026, ರಿಂದ 16–03–2026 ದಿನಾಂಕಗಳಂದು ಮಾತ್ರ ಬೆಳ್ಳಿಗೆ 10:30 ಗಂಟೆಯಿಂದ ಮದ್ಯಾಹ್ನ 01:00 ಗಂಟೆ ಒಳಗಾಗಿ ತಮ್ಮ ಮೂಲ ದಾಖಲೆಗಳೊಂದಿಗೆ ಹಾಗೂ ನಕಲು ಪ್ರತಿಗಳೊಂದಿಗೆ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳ ಕಛೇರಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿ ಆವರಣ, ಹಳೇ ಟಿ.ಬಿ ಆಸ್ಪತ್ರೆ, ಹಳೇ ಮದ್ರಾಸ್ ರಸ್ತೆ, ಸ್ವಾಮಿ ವಿವೇಕನಂದ ಮೇಟ್ರೋ ನಿಲ್ದಾಣದ ಹತ್ತಿರ, ಇಂದಿರಾನಗರ, ಬೆಂಗಳೂರು–38 ನಿಗದಿತ ಅರ್ಜಿ ನಮೂನೆಯನ್ನು ಪಡೆದು ನೋಂದಣಿ ಮಾಡಿಕೊಂಡು, ನೋಂದಣಿಯಾದ ಅರ್ಹ ಅಭ್ಯರ್ಥಿಗಳನ್ನು ಮಾತ್ರ ದಾಖಲಾತಿ ಪರಿಶೀಲನೆಗೆ ಪರಿಗಣಿಸಲಾಗುವುದು ಹಾಗೂ ಪ್ರಸ್ತುತ ಖಾಲಿ ಇರುವ ಹುದ್ದೆಗಳ ಆಧಾರದ ಮೇಲೆ ನೇಮಕಾತಿ ಆದೇಶವನ್ನು ನೀಡಲಾಗುವುದು ಎಂಬ ಷರತ್ತಿಗೆ ಒಳಪಟ್ಟಿರುತ್ತದೆ. ಈ ಆಯ್ಕೆಯು / ನೇಮಕಾತಿಯು ಎನ್‌ಹೆಚ್ ಎಂ ಮಾರ್ಗಸೂಚಿಗಳಂತೆ ರೋಸ್ಟರ್ ಕಮ್ ಮೇರಿಟ್ ಅನ್ವಯ ನೇಮಕಾತಿ ಮಾಡಿಕೊಳ್ಳಲಾಗುವುದು, ಈ ಗುತ್ತಿಗೆ ನೇಮಕಾತಿ ಪ್ರಕ್ರಿಯೆಯಲ್ಲಿ ಅರ್ಹ ಮೀಸಲಾತಿ ಅಭ್ಯರ್ಥಿಗಳು ದೊರೆಯದೇ ಇರುವ ಸಂದರ್ಭದಲ್ಲಿ ಮಾತ್ರ ಸಾಮಾನ್ಯ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಾಗುವುದು ಈ ಆಯ್ಕೆ ಪ್ರಕ್ರಿಯೆಯಲ್ಲಿ ಯಾವುದೇ ಬದಲಾವಣೆಯಾದರೂ ಆಯ್ಕೆ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ. ಅಧಿಕೃತ ವೆಬ್‌ಸೈಟ್: bengaluruurban.nic.in

## ಎಂಡಿಆರ್ ಎಸ್ ಶಾಲೆಯ ಹಳೆಯ ವಿದ್ಯಾರ್ಥಿಗಳ ಸಂಘ ಉದ್ಘಾಟನೆ

❏ ನೈಋತ್ಯ ದೇಸೆ ನ್ಯೂಸ್

**ಅರಕೇರಾ: ಹಳೆಯ ವಿದ್ಯಾರ್ಥಿಗಳನ್ನು ಒಂದುಗೂಡಿಸಿ, ಅವರ ಅನುಭವಗಳನ್ನು ಹಂಚಿಕೊಳ್ಳಲು ಮತ್ತು ಶಾಲೆಯ ಅಭಿವೃದ್ಧಿಗೆ ಕೊಡುಗೆ ನೀಡಲು ಒಂದು ಒಳ್ಳೆಯ ವೇದಿಕೆ ಸೃಷ್ಟಿಸಿದಂತಾಗಿದೆ ಎಂದು ಕ್ಷೇತ್ರ ಸಮನ್ವಯ ಅಧಿಕಾರಿ ಶಿವರಾಜ ಪೂಜಾರಿ ಅಭಿಪ್ರಾಯ ಪಟ್ಟರು.**

ತಾಲ್ಲೂಕಿನ ಆಲ್ಕೋಡ ಗ್ರಾಮದ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ನಡೆದ ಹಳೆಯ ವಿದ್ಯಾರ್ಥಿಗಳ ಸಂಘ ಉದ್ಘಾಟನೆ ಹಾಗೂ ಗುರು ವಂದನೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಪ್ರತಿಯೊಬ್ಬ ವ್ಯಕ್ತಿಯ ಪಾಲಿಗೆ ಶಾಲೆ ದಿನಗಳು ಸುವರ್ಣ ದಿನಗಳು. ನಾನೂ ಸಹ ಇದರಿಂದ ಹೊರತಲ್ಲ.ಶಿಕ್ಷಣಕ್ಕೆ ಸಂಬಂಧಿಸಿದ ಅಂದಿನ ಸಮಸ್ಯೆಗಳೇ ಬೇರೆ, ಇಂದಿನ ಸಮಸ್ಯೆಗಳೇ ಬೇರೆ. ಹಿಂದೆ ಕಲಿಕೆಗೆ ಹೆಚ್ಚಿನ ಅವಕಾಶ ಇರಲಿಲ್ಲ. ಆದರೆ ಇಂದು ಹಾಗಿಲ್ಲ. ಎಲ್ಲ ಸ್ಥಳಗಳಲ್ಲೂ ಶಾಲೆ, ಕಾಲೇಜುಗಳು ಹೆಚ್ಚಿನ ಸಂಖ್ಯೆಯಲ್ಲಿ



ಸ್ಥಾಪನೆಯಾಗಿವೆ ಎಂದು ಹೇಳಿದರು.

ನಾವು ಓದಿದ ಶಾಲಾ – ಕಾಲೇಜಿನ ಜತೆಗೆ ಒಳ್ಳೆಯ ಸಂಬಂಧ ಇಟ್ಟುಕೊಳ್ಳಬೇಕು. ಒಳ್ಳೆಯ ಭಾವನೆಯಿಂದ ಅಭಿವೃದ್ಧಿಗೆ ಸಹಕರಿಸಬೇಕು ಎಂದು ತಿಳಿಸಿದರು.

ನಂತರ ಸಮಾಜ ಕಲ್ಯಾಣ ಇಲಾಖೆ ತಾಲ್ಲೂಕು ಅಧಿಕಾರಿ ರಾಜಕುಮಾರ ಡೋಣಿ ಮಾತನಾಡಿ, ದೇಶಕ್ಕೆ ಉತ್ತಮ ನಾಗರಿಕರನ್ನು ರೂಪಿಸಿಕೊಡುವಲ್ಲಿ ಗುರುವಿನ ಪಾತ್ರ ಮಹತ್ವವಾಗಿದೆ. ವಿದ್ಯಾರ್ಥಿಗಳಲ್ಲಿ ಅಡಗಿರುವ ಜ್ಞಾನವನ್ನು ಹೊರ ತರಲು ಶಿಕ್ಷಕರು ಮಾರ್ಗದರ್ಶಿಯಾಗುತ್ತಾರೆ. ಪ್ರತಿಯೊಬ್ಬರ ಜೀವನದ ಏಳು–ಬೀಳಿಗೆ ಗುರು ಪ್ರತ್ಯಕ್ಷ ಅಥವಾ ಪರೋಕ್ಷವಾಗಿ ಕಾರಣನಾಗುತ್ತಾನೆ. ಮಾನವ ಜೀವನ ಸಾರ್ಥಕವಾಗಬೇಕಾದರೆ ಗುರುವಿನ ಸಾಕ್ಷಾತ್ಕಾರವಾಗಬೇಕಾಗುತ್ತದೆ.

ಇಂತಹ ಗುರುಗಳನ್ನು ನೆನೆಯುವಂತಹ ಕಾರ್ಯ ನಡೆಯುತ್ತಿರುವುದು ಖುಷಿಯ ಸಂಗತಿ ಎಂದರು. ಈ ವೇಳೆ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಚಾರ್ಯರಾದ ಭೀಮರಾವ ಪಾಟೀಲ್, ಶಿಕ್ಷಕರಾದ ಶಶಿಧರ್, ಕನಕಪ್ಪ, ವೀಣಾ, ಸೈನಾ ಬೇಗಂ ಸೇರಿದಂತೆ ಹಳೆಯ ವಿದ್ಯಾರ್ಥಿಗಳ ಸಂಘದ ಗೌರವ ಅಧ್ಯಕ್ಷ ಸಾಬಣ್ಣ ಆಲ್ಕೋಡ, ಅಧ್ಯಕ್ಷ ನಾಗರಾಜ ಚಿಂಚರಕಿ, ಉಪಾಧ್ಯಕ್ಷರಾದ ಶಾಂತಮ್ಮ ಹಾಗೂ ಪದಾಧಿಕಾರಿಗಳು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ವಿಬಿ ಜಿರಾಮ್ ಜಿ–ವಿಮಾ ತಿದ್ದುಪಡಿ ಕಾಯ್ದೆ ರದ್ದುಗೊಳಿಸಿ, ಮನರೇಗಾ ಕಾಯ್ದೆ ಪುನರ್ ಸ್ಥಾಪಿಸಿ ಎಂದು ಆಗ್ರಹ



❏ ನೈಋತ್ಯ ದೇಸೆ ನ್ಯೂಸ್

**ರಾಯಚೂರು: ವಿಬಿ ಜಿರಾಮ್ ಜಿ–ವಿಮಾ ತಿದ್ದುಪಡಿ ಕಾಯ್ದೆ ರದ್ದುಗೊಳಿಸಿ, ಮನರೇಗಾ ಕಾಯ್ದೆ ಪುನರ್ ಸ್ಥಾಪಿಸಿ ಬಲಪಡಿಸಬೇಕು. ವಿದ್ಯುಚ್ಛಕ್ತಿ ತಿದ್ದುಪಡಿ ಮಸೂದೆ ಹಿಂಪಡೆಯಬೇಕು.**


ಬೀಜ ಮಸೂದೆ ವಿರೋಧಿಸಿ ಫೆಬ್ರವರಿ 12 ರಂದು ನಡೆಯುವ ಸಾರ್ವತ್ರಿಕ ಮುಷ್ಕರದಲ್ಲಿ ದುಡಿಯುವ ವರ್ಗಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಎಐಸಿಸಿಟಿಯು ಸಂಘಟನೆ ಜಿಲ್ಲಾ ಘಟಕದ ಅಧ್ಯಕ್ಷ ಅಜೀಜ್ ಜಾಗೀರ್ದಾರ್ ಮನವಿ ಮಾಡಿದರು.

ರಾಯಚೂರು ತಾಲ್ಲೂಕಿನ ಅರಳಿಬೆಂಚಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರಿಗೆ ಎಐಸಿಸಿಟಿಯು ಸಂಘಟನೆ ಹಾಗೂ ಅಖಿಲ ಭಾರತ ಕೃಷಿ ಮತ್ತು ಗ್ರಾಮೀಣ ಕಾರ್ಮಿಕರ ಸಂಘದ ವತಿಯಿಂದ ಅಖಿಲ ಭಾರತ ಸಾರ್ವತ್ರಿಕ ಮುಷ್ಕರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಕರಪತ್ರ ಹಂಚಿ ಪ್ರಚಾರಾಂದೋಲನ ನಡೆಸಿ ಅವರು ಮಾತನಾಡಿದರು.

ದುಡಿಯುವ ವರ್ಗಗಳ ಕಲ್ಯಾಣಕ್ಕಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಕಾನೂನುಗಳನ್ನು ಜಾರಿ ಮಾಡದೆ ಕಾರ್ಮಿಕ ವಿರೋಧಿ, ರೈತ ವಿರೋಧಿ, ಜನ ವಿರೋಧಿ ನೀತಿಗಳ ಕಾನೂನು ಜಾರಿ ಮಾಡಿ ದುಡಿಯುವ ವರ್ಗಗಳ ಜನರನ್ನು ಸಂಕಷ್ಟಕ್ಕೀಡು ಮಾಡುತ್ತಿದೆ ಎಂದು ಆರೋಪಿಸಿದರು. ನೂತನ ಶಿಕ್ಷಣ ನೀತಿ, ರಾತ್ರಿ ಪಾಳಿಯಲ್ಲಿ ಮಹಿಳಾ ಕಾರ್ಮಿಕರ ದುಡಿಮೆಗೆ ಅವಕಾಶ ಕಲ್ಪಿಸಲಾಗಿದೆ. ಉದ್ಯೋಗ ಖಾತ್ರಿ ಯೋಜನೆಯ ಮರುಸ್ಥಾಪನೆ, ಕೆಲಸದ ಅವಧಿ 12ಗಂಟೆಗೆ ವಿಸ್ತರಣೆ ಸೇರಿ ವಿವಿಧ ಆದೇಶಗಳನ್ನು ಧಿಕ್ಕರಿಸಿ ದೇಶದ ಎಲ್ಲ ಭಾಗಗಳಲ್ಲಿ ಮುಷ್ಕರ ನಡೆಸಲಾಗುತ್ತಿದೆ. ಕಾರ್ಮಿಕರು, ದುಡಿಯುವ ವರ್ಗದವರು ಭಾಗವಹಿಸುವ ಮೂಲಕ ಮುಷ್ಕರ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು. ನಾಗೇಂದ್ರ, ನರಸಪ್ಪ, ಈರಣ್ಣ, ಸಣ್ಣ ತಾಯಪ್ಪ, ಯಲ್ಲಪ್ಪ, ದೇವರಾಜ, ನರಸಿಹಲು, ಆಂಜನೇಯ, ವೆಂಕಟೇಶ, ತಿಪ್ಪಣ್ಣ ಉಪಸ್ಥಿತರಿದ್ದರು.

## 110 /33 ಕೆವಿ ವಲ್ಕಂದಿನ್ನಿ (ಪೋತ್ನಾಳ) ಸ್ಟೇಷನ್ ನಿಂದ ಬರುವ 33 Kv ಮೇನ್ ಲೈನ್ ಬಳಗಾನೂರು ಮಾರ್ಗದ ವಿದ್ಯುತ್ ವ್ಯತ್ಯಯ

ಬಳಗಾನೂರು: 21 ಜ 110 /33 ಕೆವಿ ವಲ್ಕಂದಿನ್ನಿ (ಪೋತ್ನಾಳ) ಸ್ಟೇಷನ್ ನಿಂದ ಬರುವ 33 ಏತ ಮೇನ್ ಲೈನ್ ಬಳಗಾನೂರು ಮಾರ್ಗದ, ಪೋತ್ನಾಳ ಗ್ರಾಮದ ಹತ್ತಿರ ನ್ಯಾಷನಲ್ ಹೈವೇ


ಗುಲ್ಬರ್ಗಾ ವಿದ್ಯುಚ್ಛಕ್ತಿ ಸರಬರಾಜು ಕಂಪನಿ ನಿಯಮಿತ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು(ವಿ)

email:aeecandsindhanur@gmail.com

ದಿನಾಂಕ: 17/1/2026

ಉಲ್ಲೇಖ:– RIMA INFRA PROJECTS Ltr No.C&M GESCOM/33KV SHUTDOWN Dated:16.01.2026

Scanned with CamScanner


(National Highway Work) ರೋಡ ವಿಸ್ತರಣೆಯ ಕಾಮಗಾರಿಯ ಕೆಲಸ ಇರುವ ಕಾರಣ ದಿನಾಂಕ:– 21/01/2026, 23/01/2026, 25/01/2026, 27/01/2026, 29/01/2026,31/01/2026 ರಂದು,ಅಂದಾಜು ಬೆಳಿಗ್ಗೆ 11 :00 ಗಂಟೆಯಿಂದ ಸಾಯಂಕಾಲ 5 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಪಂಪ್ ಸೆಟ್ ಲೈನ್ ಬೆಳಿಗ್ಗೆ 4:00 ಗಂಟೆಯಿಂದ 11:00 ಗಂಟೆವರೆಗೆ ಕೊಡಲಾಗುವುದು. ದಯವಿಟ್ಟು ವಿದ್ಯುತ್ ಗ್ರಾಹಕರು ಸಹಕರಿಸಬೇಕಾಗಿ ವಿನಂತಿ

## ಕ್ಷಯರೋಗ ಪತ್ತೆಯಲ್ಲಿ ಕೊಪ್ಪಳ ಜಿಲ್ಲೆ ರಾಜ್ಯಕ್ಕೆ ಪ್ರಥಮ

❏ ನೈಋತ್ಯ ದೇಸೆ ನ್ಯೂಸ್

**ಕೊಪ್ಪಳ: ರಾಷ್ಟ್ರೀಯ ಕ್ಷಯರೋಗ ನಿರ್ಮೂಲನ ಕಾರ್ಯಕ್ರಮದಡಿಯಲ್ಲಿ ಕ್ಷಯರೋಗಿಗಳ ಪತ್ತೆಯಲ್ಲಿ ಕೊಪ್ಪಳ ಜಿಲ್ಲೆ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದುಕೊಂಡಿದೆ.ಭಾರತವನ್ನು 2025ರ ಒಳಗೆ ಕ್ಷಯ ಮುಕ್ತಗೊಳಿಸಲು ಕೇಂದ್ರ ಸರಕಾರವು ಕಾರ್ಯತಂತ್ರ ಯೋಜನೆಯನ್ನು ರೂಪಿಸಿದೆ. ಅದರಂತೆ ಕರ್ನಾಟಕ ಸರಕಾರವು ರಾಜ್ಯವನ್ನು ಕ್ಷಯರೋಗ (ಟಿಬಿ) ಮುಕ್ತಗೊಳಿಸಲು ರಾಷ್ಟ್ರೀಯ ಕಾರ್ಯತಂತ್ರ ಯೋಜನೆಗೆ ಅನುಗುಣವಾಗಿ ಕ್ಷಯಮುಕ್ತ ಕರ್ನಾಟಕ ಕಾರ್ಯತಂತ್ರ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತದೆ.**

ಈ ಯೋಜನೆಯ ಮುಖಾಂತರ ರಾಜ್ಯವನ್ನು ಕ್ಷಯ ಮುಕ್ತ ಕರ್ನಾಟಕವನ್ನಾಗಿಸುವ ದೃಷ್ಠಿಕೋನದಲ್ಲಿ ಕ್ಷಯರೋಗದ ಹೊರೆಯನ್ನು ಅವರ ಕುಟುಂಬದ ಸಾಮಾಜಿಕ ಮತ್ತು ಆರ್ಥಿಕ ದುರ್ಬಲತೆಗಳನ್ನು ಕಡಿಮೆಗೊಳಿಸುವ ಗುರಿ ಹೊಂದಲಾಗಿದೆ. ಅದರಂತೆ ಕೊಪ್ಪಳ ಜಿಲ್ಲೆಯಲ್ಲಿ ಜಿಲ್ಲಾ ಆಡಳಿತ ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಅನೇಕ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಕೊಪ್ಪಳ ಜಿಲ್ಲೆಯನ್ನು ಕ್ಷಯಮುಕ್ತ ಜಿಲ್ಲೆಯನ್ನಾಗಿಸಲು ಜಿಲ್ಲೆಯಲ್ಲಿ ಟಿ.ಬಿ. ಗುರುವಾರ, ನಿಕ್ಷಯ್ ದಿವಸ, ವಿಭಿನ್ನ ಆರೈಕೆ ಮಾದರಿಯಡಿ ಕ್ಷಯರೋಗಿಗಳ




ನೇರ ನಿಘಾವಣೆ, ಆಸ್ಪತ್ರೆಯ ಒಳರೋಗಿಗಳ ಕ್ಷಯರೋಗದ ತಪಾಸಣೆ, ಶಾಲಾ ಕಾಲೇಜು, ಕಾರ್ಖಾನೆಗಳು, ಗಣಿ ಪ್ರದೇಶ ಮತ್ತು ಕ್ವಾರಿಗಳಲ್ಲಿ ಕ್ಷಯರೋಗದ ಅರಿವು ಮತ್ತು ಜಾಗೃತಿಯನ್ನು ಮೂಡಿಸುವುದು ಮತ್ತು ಆರೋಗ್ಯ ಶಿಬಿರಗಳನ್ನು ಏರ್ಪಡಿಸಿ ಕ್ಷಯರೋಗದ ಪರೀಕ್ಷೆಯ ಮೂಲಕ ಕ್ಷಯರೋಗದ ಪತ್ತೆ ಮಾಡಲಾಗುತ್ತಿದೆ.

ಜಿಲ್ಲೆಯಲ್ಲಿ ಇರುವ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿರುವ ಚುನಾಯಿತ ಪ್ರತಿನಿಧಿಗಳಿಗೆ ಹಾಗೂ ಸಿಬ್ಬಂದಿ ವರ್ಗದವರಿಗೆ ಕ್ಷಯರೋಗದ ಅರಿವು ಮತ್ತು ಜಾಗೃತಿಯನ್ನು ನೀಡುವುದು, ಕ್ಷಯಮುಕ್ತ ಪಂಚಾಯತಿ ಕಾರ್ಯಕ್ರಮದಡಿಯಲ್ಲಿ 2025ನೇ ಸಾಲಿನಲ್ಲಿ ಮಾನದಂಡಗಳ ಪ್ರಕಾರ 13 ಗ್ರಾಮ ಪಂಚಾಯತಿಗಳನ್ನು ಕ್ಷಯಮುಕ್ತ ಗ್ರಾಮ ಪಂಚಾಯತಿಗಳೆಂದು ಘೋಷಿಸಲು ಅರ್ಹತೆಯನ್ನು ಹೊಂದಿದ್ದು, ಪಂಚಾಯತಿಗಳಿಗೆ ವಿಶ್ವ ಕ್ಷಯರೋಗ ದಿನದಂದು ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಪ್ರತಿಮೆಯನ್ನು ನೀಡಿ ಪುರಸ್ಕರಿಸಲಾಗುವುದು.

ಈ ರೀತಿಯ ಕಾರ್ಯಕ್ರಮಗಳನ್ನು ಆಯೋಜಿಸುವುದರಿಂದ ಜನರಲ್ಲಿ ಕ್ಷಯರೋಗದ ಅರಿವು ಮತ್ತು ಜಾಗೃತಿ ಹೆಚ್ಚಿಸುವುದರೊಂದಿಗೆ ಜನರಲ್ಲಿ ಕ್ಷಯರೋಗದ ಲಕ್ಷಣಗಳನ್ನು ಹೊಂದಿದವರು ಕ್ಷಯರೋಗದ ಪರೀಕ್ಷೆಗೆ ಒಳಪಡುವ ಸಂಖ್ಯೆಯು ಅಧಿಕವಾಗಿರುತ್ತದೆ. ಈ ಕಾರ್ಯಕ್ರಮದಿಂದಾಗಿ ಕ್ಷಯರೋಗಿಗಳಲ್ಲಿ ಕಳಂಕ, ತಾರತಮ್ಯ ಕಡಿಮೆ ಮಾಡಬಹುದಾಗಿದೆ. ಕೊಪ್ಪಳ ಜಿಲ್ಲೆಯಲ್ಲಿ 2025ನೇ ಸಾಲಿನಲ್ಲಿ 49,040 ಸಂಶಯಾಸ್ಪದ ಕ್ಷಯರೋಗಿಗಳ ಪರೀಕ್ಷೆಯ ಗುರಿಯನ್ನು ಹೊಂದಲಾಗಿದ್ದು, ಅದರಲ್ಲಿ 58,529 ಸಂಶಯಾಸ್ಪದ ಕ್ಷಯರೋಗಿಗಳಿಗೆ ಕಫ ಪರೀಕ್ಷೆಯನ್ನು ಮಾಡುವ ಮೂಲಕ ಶೇ.119 ಗುರಿಯನ್ನು ಸಾಧಿಸಲಾಗಿರುತ್ತದೆ. ಈ ಸಾಲಿನಲ್ಲಿ ಸರ್ಕಾರಿ ವಲಯದಲ್ಲಿ 2,130 ಮತ್ತು ಖಾಸಗಿ ವಲಯದಲ್ಲಿ 500 ಒಟ್ಟು 2,630 ಕ್ಷಯರೋಗಿಗಳ ಪತ್ತೆಯ (TB Notification) ಗುರಿಯನ್ನು ಹೊಂದಲಾಗಿದ್ದು, ಅದರಲ್ಲಿ ಒಟ್ಟು 2,346 ಕ್ಷಯರೋಗಿಗಳನ್ನು ಸರ್ಕಾರಿ ವಲಯದಲ್ಲಿ ಮತ್ತು 313 ಖಾಸಗಿ ವಲಯದಲ್ಲಿ ಒಟ್ಟು 2,659 ಪತ್ತೆ ಮಾಡುವ ಮೂಲಕ ಶೇ.101 ಪ್ರಗತಿಯನ್ನು ಸಾಧಿಸುವ ಮೂಲಕ ಕೊಪ್ಪಳ ಜಿಲ್ಲೆ ರಾಜ್ಯಕ್ಕೆ ಪ್ರಥಮ ಸ್ಥಾನದಲ್ಲಿರುತ್ತದೆ. ಅದರಲ್ಲಿ 105 ಬಹು ಔಷಧ ನಿರೋಧಕ ಕ್ಷಯರೋಗಿಗಳು ಪತ್ತೆಯಾಗಿರುತ್ತಾರೆ. ಶೇ.92 ಕ್ಷಯರೋಗಿಗಳು ಸಂಪೂರ್ಣ ಚಿಕಿತ್ಸೆಯನ್ನು ಪಡೆಯುವ ಮೂಲಕ ಯಶಸ್ಸಿನ ದರ ಹೆಚ್ಚಿದೆ.

2024–25ನೇ ಸಾಲಿನಲ್ಲಿ ನಿಕಟಪೂರ್ವ ಜಿಲ್ಲಾಧಿಕಾರಿಗಳಾದ ನಳಿನ್ ಅತುಲ್ ಅವರು ಕಲ್ಯಾಣ ಕರ್ನಾಟಕ ಗ್ರಾಮೀಣ ಅಭಿವೃದ್ಧಿ ನಿಗಮದ ಅನುದಾನದಿಂದ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನ ಕಾರ್ಯಕ್ರಮ, ಕೊಪ್ಪಳಕ್ಕಾಗಿ ಸುಮಾರು 84 ಲಕ್ಷ ರೂ.ಗಳ ಮೌಲ್ಯದ ಅತ್ಯಾಧುನಿಕ 4 ಸಿಬಿನಾಟ್ ಯಂತ್ರಗಳನ್ನು ಕ್ಷಯರೋಗ ಪರೀಕ್ಷೆಗಾಗಿ ಒದಗಿಸಿರುವುದರಿಂದ ಹೆಚ್ಚಿನ ಸಂಖ್ಯೆಯಲ್ಲಿ ಕ್ಷಯರೋಗದ ಪರೀಕ್ಷೆಗಳನ್ನು ನಿರ್ವಹಿಸಲು ಅನುಕೂಲವಾಗಿರುತ್ತದೆ.

ಮುಂದುವರೆದು ರಾಜ್ಯದಲ್ಲೇ ನಿಗದಿತ ಗುರಿಯನ್ನು ಸಾಧಿಸಿ ಪ್ರಥಮ ಸ್ಥಾನ ಪಡೆಯಲು ಸಹಕಾರ ಮತ್ತು ಮಾರ್ಗದರ್ಶನ ನೀಡಿದ ಕೊಪ್ಪಳ ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಬಿ. ಇಟ್ನಾಳ್ ಮತ್ತು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಲಿಂಗರಾಜ್ ಟಿ. ರವರಿಗೆ ಹಾಗೂ ಎನ್.ಟಿ.ಇ.ಪಿ. ಮತ್ತು ಆರೋಗ್ಯ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರಿಗೆ ಜಿಲ್ಲಾ ಕ್ಷಯರೋಗ ಮತ್ತು ಕುಷ್ಠರೋಗ ನಿರ್ಮೂಲನ ಅಧಿಕಾರಿ ಡಾ.ಶಶಿಧರ ಅವರು ಪ್ರಕಟಣೆ ಮೂಲಕ ಧನ್ಯವಾದಗಳನ್ನು ತಿಳಿಸಿದ್ದಾರೆ.

ನೈಋತ್ಯ ದೇಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ಎಸ್‌ಸಿಎಸ್‌ಪಿ, ಟಿಎಸ್‌ಪಿ ಪ್ರಗತಿ ಪರಿಶೀಲನಾ ಸಭೆಯ ಎಸ್‌ಸಿಎಸ್‌ಪಿ, ಟಿಎಸ್‌ಪಿ ವಿವಿಧ ಕಾರ್ಯಕ್ರಮಗಳನ್ನು ಮಾರ್ಚ್ ಅಂತ್ಯಕ್ಕೆ ಶೇ.100ರಷ್ಟು ಅನುಷ್ಠಾನಗೊಳಿಸಿ: ಜಿಲ್ಲಾಧಿಕಾರಿ ನಿತೀಶ್ ಕೆ

❏ ನೈಋತ್ಯ ದೇಸೆ ನ್ಯೂಸ್

**ರಾಯಚೂರು: ಜನವರಿ 20 (ಕರ್ನಾಟಕ ವಾರ್ತೆ): ಪ್ರತಿಯೊಂದು ಇಲಾಖೆಗಳು ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆಯಡಿ ಪ್ರಸಕ್ತ ಸಾಲಿನಲ್ಲಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳನ್ನು ಮಾರ್ಚ್ ಅಂತ್ಯಕ್ಕೆ ಶೇ.100ರಷ್ಟು ಅನುಷ್ಠಾನಗೊಳಿಸಬೇಕೆಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.**

ಜನವರಿ 20ರ ಮಂಗಳವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ಪರಿಶಿಷ್ಟ ಜಾತಿ ಉಪಯೋಜನೆ ಮತ್ತು ಗಿರಿಜನ ಉಪಯೋಜನೆ ಕಾರ್ಯಕ್ರಮಗಳ ಅನುಷ್ಠಾನದ ಕುರಿತು ಡಿಸೆಂಬರ್–2025ರ ಅಂತ್ಯದವರೆಗಿನ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪ ಯೋಜನೆ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ನಿರ್ಲಕ್ಷ್ಯ ತೋರದೆ ಹಾಗೂ ಕಳಪೆ ಸಾಧನೆ ಮಾಡದೆ. ನಿಗದಿತ ಕಾಲದಲ್ಲಿ ಕಾಯಕ್ರಮಗಳನ್ನು ಪೂರ್ಣಗೊಳಿಸಬೇಕು.

ಪೂರ್ಣಗೊಳಿಸದೆ ಕಳಪೆ ಸಾಧನೆಗೈದಿರುವ ಇಲಾಖೆಗಳಿಗೆ ವಿವರಣೆ ಕೋರಿ ಪತ್ರ ಬರೆಯುವಂತೆ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಕೃಷಿ ಇಲಾಖೆಯಿಂದ ಬೀಜ ಪೂರೈಕೆ, ಕೃಷಿ ಯಾಂತ್ರೀಕರಣ, ಕೃಷಿ ಸಂಸ್ಕರಣೆ, ಕರ್ನಾಟಕ ರೈತ ಸಮೃದ್ಧಿ, ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಯ ಸೇರಿದಂತೆ ಇತರೆ ಯೋಜನೆಗಳ ಕುರಿತು ಸಾರ್ವಜನಿಕರಿಗೆ ಅಗತ್ಯ ಮಾಹಿತಿ ನೀಡಿ ಯೋಜನೆಯ ಲಾಭವನ್ನು ಪಡೆಯುವಂತೆ ನೋಡಿಕೊಳ್ಳಬೇಕು. ಅಲ್ಲದೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ರಾಷ್ಟ್ರೀಯ ಪೌಷ್ಟಿಕ ಆಹಾರ ಯೋಜನೆ, ಐಸಿಡಿಎಸ್ ಸರಿಯಾಗಿ ಅನುಷ್ಠಾನ ಮಾಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು. ದೇವದಾಸಿ ಮಹಿಳೆಯರ ಪುನರ್ವಸತಿ ಆದಾಯೋತ್ಪನ್ನಕರ ಚಟುವಟಿಕೆಗೆ ಬಿಡುಗಡೆಯಾದ ಅನುದಾನ ಸರಿಯಾಗಿ ಪೂರ್ಣ ಪ್ರಮಾಣದಲ್ಲಿ ಬಳಕೆ ಮಾಡಿಕೊಳ್ಳಬೇಕು.

ಶಾಲಾ ಶಿಕ್ಷಣ ಇಲಾಖೆಯಿಂದ ನೀಡಲಾಗುವ ಶುಲ್ಕ ಮರುಪಾವತಿ ಧನಸಹಾಯವನ್ನು ಕಾಲಕಾಲಕ್ಕೆ ನೀಡಬೇಕು. ಜಿಲ್ಲೆಯ ಎಲ್ಲಾ ಸ್ಥಳೀಯ ಸಂಸ್ಥೆಗಳಿಂದ ಅನುಷ್ಠಾನಗೊಳ್ಳಲಾಗುವು ವಿವಿಧ ಕಾರ್ಯಕ್ರಮಗಳಡಿ ಅರ್ಹ ಫಲಾನುಭವಿಗಳನ್ನು ಆದಷ್ಟೂ ಬೇಗನೇ ಆಯ್ಕೆ ಮಾಡಬೇಕು. ಹಾಗೂ ಕಾಲಕಾಲಕ್ಕೆ ವಿವಿಧ ವಿವಿಧ ಸೌಲಭ್ಯಗಳ ಕುರಿತು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಬೇಕೆಂದರು. ರಾಯಚೂರಿನ ರಿಮ್ಸ್ ಆಸ್ಪತ್ರೆಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ರೋಗಿಗಳಿಗೆ ಉಚಿತವಾಗಿ ಗುಣಮಟ್ಟದ ಚಿಕಿತ್ಸೆ ನೀಡಬೇಕು. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಜನಾಂಗದವರು ವಾಸಿಸುವ ಕಾಲೋನಿ ಅಥವಾ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯ ರಚನೆ ಹಾಗೂ ಮೂಲಭೂತ ಸೌಕರ್ಯ ಬಲಪಡಿಸಲು ಸಂಬಂಧಿಸಿದ ಅಧಿಕಾರಿಗಳು ಸೂಕ್ತ ಕ್ರಮವಹಿಸಬೇಕು ಎಂದರು.

ಸಮಸ್ಯೆಗಳನ್ನು ಆಲಿಸಿ: ಜಿಲ್ಲೆಯಲ್ಲಿ ಪರಿಶಿಷ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನರ ಸಮಸ್ಯೆಗಳನ್ನು ಆಲಿಸಿ, ಅವುಗಳಿಗೆ ಶೀಘ್ರವಾಗಿ ಪರಿಹಾರ ಒದಗಿಸುವುದು ಅಧಿಕಾರಿಗಳ ಕರ್ತವ್ಯ ಇದರಲ್ಲಿ ಯಾವುದೇ ಲೋಪ ಕಂಡುಬಂದಲ್ಲಿ ಅಂತಹ ಅಧಿಕಾರಿಗಳ ವಿರುದ್ಧ ಸೂಕ್ತ ರೀತಿಯಲ್ಲಿ ಕ್ರಮಕೈಗೊಳ್ಳಲಾಗುವುದು. ಅಲ್ಲದೆ ಕಚೇರಿಗೆ ಸರಿಯಾದ ಸಮಯಕ್ಕೆ ಅಧಿಕಾರಿ, ಸಿಬ್ಬಂದಿಗಳು ಹಾಜರಾಗಬೇಕು. ಕಚೇರಿಗೆ ಸರಿಯಾದ ಸಮಯಕ್ಕೆ ಬರದಿರುವ ಕುರಿತು ದೂರಗಳು ಕೇಳಿ ಬರುತ್ತಿವೆ. ಕೂಡಲೇ ಅಧಿಕಾರಿಗಳು ಎಚ್ಚರಗೊಳ್ಳಬೇಕು. ಸಾರ್ವಜನಿಕರ ಕುಂದುಕೊರತೆಗಳನ್ನು ಅಲಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಪ್ರಸ್ತಾವನೆ ಸಲ್ಲಿಸಲು ಸೂಚನೆ: ವಿವಿಧ ಇಲಾಖೆಗಳಿಂದ ಅನುಷ್ಠಾನ ಮಾಡುತ್ತಿರುವ ಎಸ್.ಎಸ್.ಪಿ/ಟಿ.ಎಸ್.ಪಿ ಕಾರ್ಯಕ್ರಮಗಳಿಗೆ 2026–27ನೇ ಸಾಲಿಗೆ ಕರಡು ಆಯವ್ಯಯ ಪ್ರಸ್ತಾವನೆ ಸಿದ್ಧಪಡಿಸಲು ಜಿಲ್ಲಾ ಮೇಲ್ವಿಚಾರಣಾ ಸಮಿತಿಗಳು ಅನುಸೂಚಿತ ಜಾತಿಗಳು ಅಥವಾ ಅನುಸೂಚಿತ ಬುಡಕಟ್ಟುಗಳ ಸಮುದಾಯದ ಪ್ರತಿನಿಧಿಗಳೊಂದಿಗೆ ಸಮಾಲೋಚಿಸುವುದರ ಜೊತೆಗೆ ಯಾವುದಾದರೂ ಪ್ರಸ್ತಾವನೆಗಳು ಸಲಹೆಗಳು ಇದ್ದರೆ 2026ರ ಜನವರಿ 23ರೊಳಗಾಗಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಸಿಂಧೂರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ನವೀನ್ ಕುಮಾರ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿರೇಶ್ ನಾಯಕ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ನಜೀರ್ ಅಹಮದ್, ತೋಟಗಾರಿಕೆ ಇಲಾಖೆಯ ಉಪ ನಿರ್ದೇಶಕ ಮಹಮ್ಮದ್ ಅಲಿ, ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ಶರಣಪ್ಪ, ರಿಮ್ಸ್ ಸಂಸ್ಥೆಯ ನಿರ್ದೇಶಕ ಡಾ.ರಮೇಶ ಬಿ.ಕೆ., ಆದಿಜಾಂಬವ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ರಾಜೇಂದ್ರ ಜಲ್ದಾರ್, ಕೃಷಿ ಇಲಾಖೆಯ ಉಪ ನಿರ್ದೇಶಕ ನಹೀಂ ಹುಸೇನ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಇದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### BSc Nutrition and Dietetics

B.Sc. ರೆಸ್ಪಿರೇಟರಿ ಥೆರಪಿ (B.Sc. RT) ಎನ್ನುವುದು ಉಸಿರಾಟ ಸಂಬಂಧಿತ ರೋಗಗಳನ್ನು ಚಿಕಿತ್ಸಿಸುವ ಆರೋಗ್ಯ ವೃತ್ತಿಪರರನ್ನು ತರಬೇತುಗೊಳಿಸುವ ಪದವಿ ಮಟ್ಟದ ಕೋರ್ಸ್ ಆಗಿದೆ. ಈ ಕೋರ್ಸ್‌ನಲ್ಲಿ ಮಾನವ ದೇಹರಚನೆ, ಶರೀರಕ್ರಿಯೆ, ಔಷಧಶಾಸ್ತ್ರ ಹಾಗೂ ಕ್ಲಿನಿಕಲ್ ಕೌಶಲ್ಯಗಳ ಅಧ್ಯಯನದ ಮೂಲಕ ಆಸ್ಪತ್ರೆಗಳು ಮತ್ತು ಕ್ಲಿನಿಕ್‌ಗಳಲ್ಲಿ ಉಸಿರಾಟ ಸಮಸ್ಯೆ ಹೊಂದಿರುವ ರೋಗಿಗಳನ್ನು ನಿರ್ವಹಿಸಲು ಅಗತ್ಯವಾದ ಜ್ಞಾನವನ್ನು ನೀಡಲಾಗುತ್ತದೆ. ಮುಖ್ಯ ವಿಷಯಗಳಲ್ಲಿ ಮಾನವ ದೇಹರಚನೆ, ಶರೀರಕ್ರಿಯೆ, ಜೈವರಸಾಯನಶಾಸ್ತ್ರ, ಪಥಾಲಜಿ, ಫಾರ್ಮಕಾಲಜಿ ಹಾಗೂ ಪಲ್ಮನರಿ ಫಂಕ್ಷನ್ ಟೆಸ್ಟಿಂಗ್ (PFT) ಸೇರಿವೆ. ಜೊತೆಗೆ ಆಸ್ಪತ್ರೆಗಳಲ್ಲಿ ಪ್ರಾಯೋಗಿಕ ಕ್ಲಿನಿಕಲ್ ತರಬೇತಿಯೂ ಇರುತ್ತದೆ. ಈ ಕೋರ್ಸ್‌ವು ತೀವ್ರ ಚಿಕಿತ್ಸಾ ಘಟಕಗಳು (ICU), ಪುನರ್ವಸತಿ ಮತ್ತು ರೋಗಿ ಶಿಕ್ಷಣ ಕ್ಷೇತ್ರಗಳಲ್ಲಿ ಕೆಲಸ ಮಾಡಲು ವಿದ್ಯಾರ್ಥಿಗಳನ್ನು ಸಿದ್ಧಗೊಳಿಸುತ್ತದೆ. ಮುಂದಿನ ಅಧ್ಯಯನವಾಗಿ ಒ.ಖಥಿ. ರೆಸ್ಪಿರೇಟರಿ ಥೆರಪಿ ಅಥ-ವಾ ಆಸ್ಪತ್ರೆ ಆಡಳಿತ (Hospital Administration) ಮುಂತಾದ ಕೋರ್ಸ್‌ಗಳನ್ನು ಮುಂದುವರಿಸಬಹುದು. ಕೋರ್ಸ್ ಅವಲೋಕನ (B.Sc. Respiratory Therapy) ಏನು ಇದು: ಉಸಿರಾಟ ಆರೈಕೆ ಕ್ಷೇತ್ರದಲ್ಲಿ ತಜ್ಞರನ್ನು ತಯಾ-ರಿಸುವ ಪದವಿ ಮಟ್ಟದ ಕೋರ್ಸ್. ಮುಖ್ಯ ಗಮನ: ಫೆಫಸುಗಳು ಮತ್ತು ಉಸಿರಾಟಕ್ಕೆ ಸಂಬಂಧಿಸಿದ ಸಮಸ್ಯೆಗಳನ್ನು ಹೊಂದಿರುವ ರೋಗಿಗಳನ್ನು ಪರಿಶೀಲಿಸುವುದು, ಚಿಕಿತ್ಸೆ ನೀಡುವುದು ಮತ್ತು ಆರೈಕೆ ಮಾಡುವುದು. ಕಲಿಯುವ ಕೌಶಲ್ಯಗಳು: ಉಸಿರಾಟ ಉಪಕರಣಗಳ ಬಳಕೆ, ಥೆರಪಿ ನೀಡುವುದು, ರೋಗಿಗಳಿಗೆ ಮಾರ್ಗದರ್ಶನ ನೀಡುವುದು, ಪಲ್ಮನರಿ ಫಂಕ್ಷನ್ ಟೆಸ್ಟ್‌ಗಳು (PFTs) ನಡೆಸುವುದು. ಮುಖ್ಯ ವಿಷಯಗಳು (ಪಠ್ಯಕ್ರಮ) ಮೂಲ ವಿಜ್ಞಾನ ವಿಷಯಗಳು: ಮಾನವ ದೇಹರಚನೆ, ಶರೀರಕ್ರಿಯೆ, ಜೈವರಸಾಯನಶಾಸ್ತ್ರ, ಸೂಕ್ಷ್ಮ ಜೀವಶಾಸ್ತ್ರ, ಪಥ-ಾಲಜಿ. ರೆಸ್ಪಿರೇಟರಿ ಥೆರಪಿ ಪ್ರಮುಖ ವಿಷಯಗಳು: ಮೂಲ ಮತ್ತು ಉನ್ನತ ರೆಸ್ಪಿರೇಟರಿ ಥೆರಪಿ, ಫಾರ್ಮಕಾಲಜಿ, ಪಲ್ಮನರಿ ಫಂಕ್ಷನ್ ಟೆಸ್ಟ್‌ಗಳು (PFT). ಸಾಮಾನ್ಯ ವಿಷಯಗಳು: ಕಂಪ್ಯೂಟರ್ ಶಿಕ್ಷಣ, ಪರಿಸರ ಅಧ್ಯಯನ, ಸಂವಹನಾತ್ಮಕ ಇಂಗ್ಲಿಷ್, ಕನ್ನಡ. ಪ್ರಾಯೋಗಿಕ ತರಬೇತಿ: ಆಸ್ಪತ್ರೆಗಳಲ್ಲಿ ಕ್ಲಿನಿಕಲ್ ಪೋಸ್ಟಿಂಗ್‌ಗಳು. ಕೆಲಸದ ಕ್ಷೇತ್ರಗಳು: ಆಸ್ಪತ್ರೆಗಳು, ಕ್ಲಿನಿಕ್‌ಗಳು, ಪುನರ್ವಸತಿ ಕೇಂದ್ರಗಳು, ಗೃಹ ಆರೋಗ್ಯ ಸೇವೆಗಳು. ಪಾತ್ರಗಳು: ರೆಸ್ಪಿರೇಟರಿ ಥೆರಪಿಸ್ಟ್, ಖಅಗಗಳಲ್ಲಿ ರೋಗಿಗಳ ಆರೈಕೆ, ರೋಗನಿರ್ಣಯಕ್ಕೆ ಸಹಾಯ, ಲೈಫ್-ಸಪೋರ್ಟ್ ಉಪಕರಣಗಳ ನಿರ್ವಹಣೆ. ಅವಧಿ (Duration): 3 ರಿಂದ 4 ವರ್ಷಗಳು (3 to 4 years). ಅರ್ಹತೆ (Eligibility): 10+2 (ಕಗಅ) ವಿಜ್ಞಾನ ವಿಭಾಗ (ಬಯಾಲಜಿ, ಫಿಸಿಕ್ಸ್, ಕೆಮಿಸ್ಟ್ರಿ) ಕನಿಷ್ಠ 50% ಅಂಕಗಳೊಂದಿಗೆ.

1ನೇ ಪುಟದಿಂದ....

ಮೇಲ್ನೋಟಕ್ಕೆ ಸಾಮಾನ್ಯ ಮನೆ ಎನಿಸಿದರೂ, ಒಳಗೆ ಪ್ರವೇಶಿಸಿದರೆ ಸುಮಾರು ಹತ್ತು ಅಡಿ ಮಣ್ಣಿನಡಿಯಲ್ಲಿ ಹುದುಗಿದ್ದ ಚಾಲುಕ್ಯರ ಕಾಲದ ಪುರಾತನ ದೇವಾಲಯ ಪತ್ತೆಯಾಗಿದ್ದು ಇದು ನಾಲ್ಕನೇ ಶತಮಾನದ ಶಿವನ ಮೂರ್ತಿಯಾಗಿದೆ. ಇತಿಹಾಸಕಾರರ ಪ್ರಕಾರ, ಇದು 10–11ನೇ ಶತಮಾನದ ಚಾಲುಕ್ಯರ ಕಾಲದ ಈಶ್ವರ ದೇವಸ್ಥಾನವಾಗಿದ್ದು, ವಾಸ್ತುಶಿಲ್ಪ ಹಾಗೂ ಶಿಲ್ಪಕಲೆ ದೃಷ್ಟಿಯಿಂದ ಅತ್ಯಂತ ಮಹತ್ವದ್ದಾಗಿದೆ. ದೇವಸ್ಥಾನದ ಗರ್ಭಗುಡಿ, ಶಿಲ್ಪ ಕೆತ್ತನೆಗಳು ಹಾಗೂ ವಾಸ್ತು ವಿನ್ಯಾಸಗಳು ಪ್ರಾಚೀನ ಪರಂಪರೆಯನ್ನು ಪ್ರತಿಬಿಂಬಿಸುತ್ತಿವೆ. ಈ ಬೆಳವಣಿಗೆ ಹಿನ್ನೆಲೆಯಲ್ಲಿ ಸರ್ಕಾರ ಮತ್ತು ಪುರಾತತ್ವ ಇಲಾಖೆ ದೇವಸ್ಥಾನವನ್ನು ವಶಕ್ಕೆ ಪಡೆದು ಜೀರ್ಣೋದ್ಧಾರ ಮಾಡುವ ಯೋಜನೆ ರೂಪಿಸುತ್ತಿದೆ. ಸ್ಥಳ ಪರಿಶೀಲನೆ ನಡೆಸಿದ ಅಧಿಕಾರಿಗಳು ಶೀಘ್ರದಲ್ಲೇ ಸಂರಕ್ಷಣಾ ಕಾರ್ಯ ಆರಂಭಿಸುವ ಭರವಸೆ ನೀಡಿದ್ದಾರೆ. ಆದರೆ, ಚೌಕಿಮಠ ಕುಟುಂಬದ ಶರಣಯ್ಯ ಹಾಗೂ ಶೇಖರಯ್ಯ ಚೌಕಿಮಠ ಅವರು ಸ್ಪಷ್ಟಪಡಿಸಿರುವಂತೆ ಇಲ್ಲಿ ವಾಸಿಸುವವರೆಲ್ಲರೂ ಬಡ ಕುಟುಂಬಗಳು. ಸರ್ಕಾರ ಸೂಕ್ತ ಪರಿಹಾರ ನೀಡಿದರೆ ಮಾತ್ರ ಮನೆ ಬಿಟ್ಟು ಕೊಡಲು ಸಿದ್ಧ ಎಂದಿದ್ದಾರೆ. ಪ್ರಸ್ತುತ ಈ ಆವರಣದಲ್ಲಿ ಶರಣಯ್ಯ ಚೌಕಿಮಠ, ಶೇಖರಯ್ಯ ಚೌಕಿಮಠ, ಬಸವ್ವ ಈರಯ್ಯ ಚೌಕಿಮಠ, ಕೊಟ್ರಯ್ಯ ಚೌಕಿಮಠ ಹಾಗೂ ಈರಮ ಶಂಕ್ರಯ್ಯ ಚೌಕಿಮಠ ಕುಟುಂಬಗಳು ವಾಸಿಸುತ್ತಿವೆ. ಇತಿಹಾಸ ಮತ್ತು ಜನಜೀವನದ ನಡುವಿನ ಈ ಮಹತ್ವದ ಪ್ರಕರಣದಲ್ಲಿ ಮುಂದಿನ ನಿರ್ಧಾರ ಸರ್ಕಾರದ ಕೈಯಲ್ಲಿದ್ದು, ಲಕ್ಕುಂಡಿ ಗ್ರಾಮ ಮತ್ತೊಮ್ಮೆ ಐತಿಹಾಸಿಕ ಕೇಂದ್ರಬಿಂದುವಾಗಿ ಹೊರಹೊಮ್ಮುವ ಸಾಧ್ಯತೆ ದಟ್ಟವಾಗಿದೆ.

# ನೀರಮಾನ್ವಿ ಶ್ರೀ ರೇಣುಕಾ ಯಲ್ಲಮ್ಮ ದೇವಿ ಜಾತ್ರೆ ಪೂರ್ವಭಾವಿ ಸಭೆ

❑ ನೈಜ್ಯ ದೆಸೆ ನ್ಯೂಸ್



**ಮಾನ್ವಿ: ತಾಲೂಕಿನ ನೀರಮಾನ್ವಿ ಗ್ರಾಮದಲ್ಲಿನ ಮುಜರಾಯಿ ಇಲಾಖೆಗೆ ಸೇರಿದ ಶ್ರೀ ರೇಣುಕಾ ಯಲ್ಲಮ್ಮ ದೇವಿ ದೇವಸ್ಥಾನದ ಆವರಣದಲ್ಲಿ ಜಾತ್ರಾಮಹೋತ್ಸವದ ಅಂಗವಾಗಿ ನಡೆದ ಪೂರ್ವಭಾವಿ ಸಭೆಯಲ್ಲಿ ಶಾಸಕ ಶ್ರೀ ಹಂಪಯ್ಯ ನಾಯಕ ಮಾತನಾಡಿ, ಫೆಬ್ರವರಿ 6ರಿಂದ 8ರವರೆಗೆ ನಡೆಯುವ ಗ್ರಾಮದೇವತೆ ಶ್ರೀ ರೇಣುಕಾ ಯಲ್ಲಮ್ಮ ದೇವಿ ಜಾತ್ರೆಗೆ ಲಕ್ಷಾಂತರ ಭಕ್ತರು ಆಗಮಿಸುವ ನಿರೀಕ್ಷೆ ಇರುವುದರಿಂದ ಭಕ್ತರಿಗೆ ಯಾವುದೇ ತೊಂದರೆಯಾಗದಂತೆ ತಾಲೂಕು ಆಡಳಿತ ಅಗತ್ಯ ಎಲ್ಲಾ ಮುನ್ನೆಚ್ಚರಿಕೆ ಹಾಗೂ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ಸೂಚಿಸಿದರು.**

ಮಹಾರಾಷ್ಟ್ರ, ತೆಲಂಗಾಣ ಸೇರಿದಂತೆ ವಿವಿಧ ರಾಜ್ಯಗಳು ಹಾಗೂ ಜಿಲ್ಲೆಯ ವಿವಿಧ ಭಾಗಗಳಿಂದ ಭಕ್ತರು ಆಗಮಿಸುವ ಹಿನ್ನೆಲೆ ಮೂಲಸೌಕರ್ಯ, ಕುಡಿಯುವ ನೀರು, ವಿದ್ಯುತ್, ಸ್ವಚ್ಛತೆ ಹಾಗೂ ಆರೋಗ್ಯ ಸೇವೆಗಳಿಗೆ ವಿಶೇಷ ಗಮನ ನೀಡಬೇಕು ಎಂದು ತಹಸೀಲ್ದಾರ್ ಶ್ರೀ ಭೀಮರಾಯ ಬಿ. ರಾಮಸಮುದ್ರ ಅವರಿಗೆ ಸೂಚಿಸಿದರು. ಜಾತ್ರೆಗೆ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳಾ ಭಕ್ತರು ಆಗಮಿಸುವುದರಿಂದ ಅವರ ಭದ್ರತೆಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಪಿ.ಐ. ಶ್ರೀ ಸೋಮಶೇಖರ ಕೆಂಚರೆಡ್ಡಿ ಅವರಿಗೆ ಸೂಚನೆ ನೀಡಿದರು. ಜಾತ್ರೆಯ ಯಶಸ್ಸಿಗೆ ತಾಲೂಕು ಆಡಳಿತದ ಜೊತೆಗೆ ಗ್ರಾಮಸ್ಥರೂ ಸಹಕಾರ ನೀಡಿದರೆ ಮಾತ್ರ ಕಾರ್ಯಕ್ರಮ ಸುಗಮವಾಗಿ ನಡೆಯಲಿದೆ ಎಂದು ಹೇಳಿದರು.

ತಹಸೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಮಾತನಾಡಿ, ದೇವಸ್ಥಾನದ ಸೌಲಭ್ಯಗಳ ಜೊತೆಗೆ ಗ್ರಾಮಸ್ಥರು ಸೇವಾ ರೂಪದಲ್ಲಿ ಅಗತ್ಯ ಸಹಕಾರ ನೀಡಬಹುದಾಗಿದೆ. ಭಕ್ತರಿಗೆ ಅಗತ್ಯ ಸೌಲಭ್ಯಗಳನ್ನು ತಾಲೂಕು ಆಡಳಿತ ಹಾಗೂ ದೇವಸ್ಥಾನದ ವತಿಯಿಂದ ಒದಗಿಸಲಾಗುವುದು ಎಂದು ತಿಳಿಸಿದರು. ಪಿ.ಐ. ಕೆಂಚರೆಡ್ಡಿ ಮಾತನಾಡಿ, ಜಾತ್ರೆ ಸಮಯದಲ್ಲಿ ಪ್ರತಿವರ್ಷ ಲಕ್ಷಾಂತರ ಭಕ್ತರು ಆಗಮಿಸುವುದರಿಂದ ಭಕ್ತರ ಸುರಕ್ಷತೆಗೆ ಸಿಸಿ ಕ್ಯಾಮೆರಾ ಹಾಗೂ ಬೆಳಕಿನ ವ್ಯವಸ್ಥೆ ಮಾಡಲಾಗುವುದು. ಜಾತ್ರೆಗೆ ಅಂಗಡಿಗಳನ್ನು ಹಾಕುವವರು ರಸ್ತೆ ಬಿಟ್ಟು ವ್ಯವಸ್ಥಿತವಾಗಿ ಹಾಕಿಕೊಳ್ಳಬೇಕು. ಮುಖ್ಯ ರಸ್ತೆಯಿಂದ ಸೀಕಾಲ್ ಮಾರ್ಗವಾಗಿ ಸಂಚಾರ ವ್ಯವಸ್ಥೆ ಬದಲಾಯಿಸಿ ವಾಹನ ದಟ್ಟಣೆ ಆಗದಂತೆ ಕ್ರಮ ಕೈಗೊಳ್ಳಲಾಗುವುದು. ಪೊಲೀಸ್ ಸಿಬ್ಬಂದಿಯ ಜೊತೆಗೆ ಗ್ರಾಮ ಯುವಕರು ಸ್ವಯಂಸೇವಕರಾಗಿ ಸೇವೆ ಸಲ್ಲಿಸಲು ಇಚ್ಛಿಸಿದಲ್ಲಿ ಗುರುತಿನ ಚಿಟಿ ನೀಡಲಾಗುವುದು ಎಂದು ತಿಳಿಸಿದರು.

ಗ್ರಾಮದ ಮುಖಂಡ ದುರುಗೇಶ ಮಾತನಾಡಿ, ಜಾತ್ರೆಗೆ ಬರುವ ಭಕ್ತರಿಗೆ ಕುಡಿಯಲು ಹಾಗೂ ಸ್ನಾನಕ್ಕೆ ಅನುಕೂಲವಾಗುವಂತೆ ಕಾಲುವೆಗೆ 10 ದಿನಗಳ ಕಾಲ ನೀರು ಬಿಡಬೇಕು. ಕುಡಿಯುವ ನೀರಿನ ಕೊಳವೆಬಾವಿಗಳಿಗೆ ನಿರಂತರ ವಿದ್ಯುತ್ ಒದಗಿಸಬೇಕು. ರಸ್ತೆ ಅತಿ-ಕ್ರಮಣ ತೆರವುಗೊಳಿಸಿ, ಜಾತ್ರೆಗೆ ಆಗಮಿಸುವ ಟ್ರಾಕ್ಟರ್‌ಗಳಿಗೆ ಪ್ರತ್ಯೇಕ ನಿಲುಗಡೆ ವ್ಯವಸ್ಥೆ ಕಲ್ಪಿಸಬೇಕು ಎಂದು ಮನವಿ ಮಾಡಿದರು. ಗ್ರಾಮಸ್ಥ ಅರಕೇರ ರಾಮಣ್ಣ ಮಾತನಾಡಿ, ದೇವಸ್ಥಾನದ ಜನರೇಟರ್ ದುರಸ್ತಿ ಮಾಡಬೇಕು. ತೆಂಗಿನಕಾಯಿ ಹೊಡೆಯಲು ಪ್ರತ್ಯೇಕ ಸ್ಥಳ ನಿಗದಿಪಡಿಸಬೇಕು. ಅಂಬುಲೆನ್ಸ್ ಹಾಗೂ ಅಗ್ನಿಶಾಮಕ ವಾಹನ ವ್ಯವಸ್ಥೆ ಕಲ್ಪಿಸ

# ಅಂಗನವಾಡಿ ಅವ್ಯವಸ್ಥೆ ಸರಿಪಡಿಸುವಂತೆ ಆಗ್ರಹಿಸಿ ತಹಸಿಲ್ದಾರಗೆ ಮನವಿ



❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪಟ್ಟಣದ ವಾರ್ಡ್ ನಂಬರ್ 19ರ ಭೋವಿ ವಡ್ಡರ ಓಣಿಯಲ್ಲಿ ಬರುವ ಅಂಗನವಾಡಿ ಕೇಂದ್ರದ ಅವ್ಯವಸ್ಥೆಗೆ ಕಾರಣೀಭೂತರಾದ ಅಂಗನವಾಡಿ ಕೇಂದ್ರದ ಕಾರ್ಯಕರ್ತರು, ಸಹಾಯಕರು ಹಾಗೂ ಸಂಬಂಧಿಸಿದ ಅಧಿಕಾ-ರಿಗಳನ್ನು ವಜಾಗೊಳಿಸಿ ಅವರ ಮೇಲೆ ಕಠಿಣ ಕ್ರಮ ಜರುಗಿಸಬೇಕೆಂದು ಆಗ್ರಹಿಸಿ ಪಟ್ಟಣದ ಅಂಬೇಡ್ಕರ್ ಸೇನೆ ತಾಲೂಕ ಘಟಕ ಹಾಗೂ ಬಾಬು ಜಗಜೀವನ ರಾಮ್ ಮಹಿಳಾ ಸ್ವಸಹಾಯ ಸಂಘದ ಪದಾಧಿಕಾರಿಗಳು ಇಲಾಖೆಯ ಅತ್ತಾರ ಮುನ್ನಾ ಮೂಲಕ ತಹಸಿಲ್ದಾರ್‌ಗೆ ಮಂಗಳವಾರ ಮನವಿ ಸಲ್ಲಿಸಿದರು.**

ಈ ಸಂದರ್ಭದಲ್ಲಿ ಅಂಬೇಡ್ಕರ್ ಸೇನೆ ಜಿಲ್ಲಾ ಉಪಾಧ್ಯಕ್ಷ ಬಸ್ಸು ಮಾದರ ಹಾಗೂ ತಾಲೂಕ ಅಧ್ಯಕ್ಷ ಗೋಪಾಲ ಕಟ್ಟಿಮನಿ ಮಾತನಾಡಿ ಸದರಿ ಅಂಗನವಾಡಿ ಕೇಂದ್ರ ಅವ್ಯವಸ್ಥೆಯ ಆಗರ ವಾಗಿದ್ದು, ಕಳೆದ 7 ತಿಂಗಳುಗಳಿಂದ ಕೇಂದ್ರಕ್ಕೆ ಬರುವ ದವಸ ದಾನ್ಯಗಳನ್ನು ಮಕ್ಕಳಿಗೆ ಹಾಗೂ ಬಾಣಂತಿಯರಿಗೆ ಪೂರೈಸಿರುವುದಿಲ್ಲ, ಮಕ್ಕಳಿಗೆ ಪಾಠ ಹೇಳಿಕೊಡಲು ಒಬ್ಬ ಶಿಕ್ಷಕರೂ ಕೂಡಾ ಇಲ್ಲ. ಆಹಾರ ವಸ್ತುಗಳ ದಾಸ್ತಾನು ಮಾಡುವ ಕೋಣೆ ಇಲಿ ಹೆಗ್ಗಣಗಳ ತಾಣವಾಗಿದೆ, ಯಾವುದೇ ರೀತಿಯ ಸ್ವಚ್ಛತೆ ಕೈಗೊಂಡಿಲ್ಲ ಈ ಎಲ್ಲ ದುರಾವಸ್ಥೆ ಕುರಿತು ಈಗಾಗಲೇ ಇಲಾಖೆಯ ಸಿಡಿಪಿಓ ಹಾಗೂ ಸೂಪರ್ವೈಸರ್‌ಗೆ ಈ ಮೊದಲು ತಿಳಿಸಿದ್ದು ಅವರು ಭೇಟಿ ನೀಡಿ ಪರಿಶೀಲನೆ ಕೂಡಾ ನಡೆಸಿದ್ದಾರೆ.

ಆದರೆ ಇಲ್ಲಿವರೆಗೆ ತಪ್ಪಿತಸ್ಥರ ಮೇಲೆ ಕ್ರಮ ಜರುಗಿಸಿಲ್ಲ, ನಾವು ಈಗ ಮತ್ತೇ ತಹಸಿಲ್ದಾರ್ ಅವರಿಗೆ ಮನವಿ ಮೂಲಕ ಆಗ್ರಹಿಸುತಿದ್ದೇವೆ ಬೇಜವಾಬ್ದಾರಿ ತೋ-ರಿದ ಎಲ್ಲರನ್ನು ಈ ಕೂಡಲೇ ಸೇವೆಯಿಂದ ವಜಗೊಳಿಸಬೇಕು ಹೀಗೆ ಮಾಡದೆ ಹೋದರೆ ಮುಂದಿನ ದಿನಗಳಲ್ಲಿ ಉಗ್ರವಾದ ಹೋರಾಟ ನಡೆಸುವುದು ಅನಿವಾರ್ಯವಾಗುತ್ತದೆ ಎಂದರು. ಈ ಸಮಯದಲ್ಲಿ ಅಂಬೇಡ್ಕರ್ ಸೇನೆ ತಾಲೂಕ ಘಟಕದ ಪದಾಧಿಕಾ-ರಿಗಳಾದ ಭೀಮಸಿ ಕಾರಕೂರ ಪ್ರಜ್ವಲ್ ಕಟ್ಟಿಮನಿ, ಕಾಶಿನಾಥ್ ಮಾದರ, ಭೀಮಾಶಂಕರ ಸೋನಾನೆ, ಸಾಹೇಬಣ್ಣ ಧವಳಗಿ, ಭಾಗ್ಯಶ್ರೀ ಹೊಟಗಾರ,ಭಾರತಿ ಸೋನಾನೆ, ಹುಸೇನ್ ಜಕಾತಿ ಹಾಗೂ ವೃಂದಾ ಬ್ಯಾಕೋಡ್ ಇದ್ದರು.

# ಅಧಿಕಾರಿಗಳಿಗೆ ರಾಜಕಾರಣಿಗಳಿಗೆ ಪರಿಶುದ್ದ ಹಾಲು ಹಿಂಡುವ ಹಗಲು ದರೋಡೆ ನರೇಗಾ ಯೋಜನೆ: ಕೆ.ವಿ

❑ ನೈಜ್ಯ ದೆಸೆ ನ್ಯೂಸ್



**ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಕೊಟ್ಟ ಮನರೇಗಾ ಯೋಜನೆ ಬಡ ಕೂಲಿಕಾರ್ಮಿಕ-ರಿಗೆ ಎಷ್ಟರಮಟ್ಟಿಗೆ ಉಪಯೋಗವಾಗಿದೆ. ಜನರು ಕೊಟ್ಟ ತೆರಿಗೆ ಹಣ ಖರ್ಚಾಗುತ್ತಿದೆ ಎಂದರೆ, ಈ ಮನರೇಗಾ ಯೋಜನೆ ಹಸಿರು ಹುಲ್ಲು ಗಾವಲಿನ ತಾಣವಾಗಿತ್ತು. ಕೂಲಿಕಾರರಿಂದ ಹಿಡಿದು, ರಾಜಕಾರಣಿಗಳವರೆಗೂ ಹಂಚಿ ತಿನ್ನುವ ಯೋಜನೆಯಾಗಿದೆ ಎಂದು ಮಾಜಿ ಸಂಸದರಾದ ಕೆ.ವಿರುಪಾಕ್ಷಪ್ಪ ಗಂಭೀರ ಆರೋಪ ಮಾಡಿದರು.**

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರದಂದು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರದ ವಾದ ಮಹಾತ್ಮಗಾಂಧಿ ಹೆಸರು ಬದಲು ಹಾಗೂ ಕೂಲಿ ಕಾರ್ಮಿಕರಿಗೆ ಅನ್ಯಾಯ ಆಗುತ್ತಿದೆ ಎಂಬುದಾಗಿದೆ. ಆದ-ರೆ ಕಾಂಗ್ರೆಸ್ ಮಹಾತ್ಮಗಾಂಧಿ ಅವರಿಗೆ ಈ 78 ವರ್ಷಗಳಲ್ಲಿ ಎಷ್ಟು ಗೌರವಕೊಟ್ಟಿದೆ. ಈಗ ಯಾರ ಕೂಡ ಕಾಂಗ್ರೆಸ್ಸಿನಲ್ಲಿ ಇಲ್ಲ. ಅಥ-ವಾ ಇವರು ಉಳಿಸಿಕೊಂಡಿಲ್ಲ. ಜೊತೆಗೆ ಸ್ವತಂತ್ರ ಹೋರಾಟಗಾರರ ಕುಟುಂಬಸ್ಥರನ್ನ ಎಷ್ಟರಮಟ್ಟಿಗೆ ಬಳಸಿಕೊಂಡಿದೆ ಮತ್ತು ಅವಕಾಶ ಕಲ್ಪಿಸಿಕೊಟ್ಟಿದೆ ಮಹಾತ್ಮಗಾಂಧಿಗಾಗಲಿ ಅವರ ಕುಟುಂಬದ ಸದಸ್ಯರಾಗಲಿ, ಅವಮಾನ ಆಗಿರುವುದು ಕಾಂಗ್ರೆಸ್ ಪಕ್ಷದಿಂದ ಹೊರತು ಬೇರೆ ಯಾವುದೇ ಪಕ್ಷಗಳಿಂದಲ್ಲ.

ಉದ್ಯೋಗ ಖಾತ್ರಿ ಯೋಜನೆಯ ಹೆಸರನ್ನು ಬದಲಾಯಿಸಿದ್ದನ್ನೇ ಸಹಿಸದ ಕಾಂಗ್ರೆಸ್ಸಿನವರು, ಮಹಾತ್ಮಗಾಂಧಿಯವರ ಕುಟುಂಬಕ್ಕೆ ಇವರ ಕೊಡುಗೆ ಏನು? ಅವರ ಮನೆತನದವರಿಗೆ ಎಷ್ಟು ಜನಕ್ಕೆ ಇವರು ಅಧಿಕಾರ ಕೊಟ್ಟಿದ್ದಾರೆ ? ಮನಮೋಹನ್ ಸಿಂಗ್ ಅವರು, ಈ ಮನರೇಗಾವನ್ನು ಜಾರಿಗೆ ತಂದಿದ್ದು ಮೆಚ್ಚುವಂತಹದ್ದು, ಆದರೆ ಖರ್ಚಾದ ಹಣದಿಂದ ಎಷ್ಟು ಆಸ್ತಿ ಆಗಿದೆ. ಈ ನರೇಗಾ ಯೋಜನೆ ಅಧಿಕಾರಿಗಳಿಗೆ, ರಾಜಕಾರಣಿಗಳಿಗೆ, ಪರಿಶುದ್ಧ ಹಾಲು ಹಿಂಡುವ ಯೋಜನೆಯಾಗಿದೆ. ಮಹಾತ್ಮಾಗಾಂಧಿ ಉದ್ಯೋಗ ಖಾತ್ರಿ ಯೋಜನೆಯಲ್ಲಿ ನೈಜ ಕೂಲಿಕಾರರನ್ನು ಹೊರತು ಪಡಿಸಿ, ಮೇಟಿಗಳು, ಅಧಿಕಾರಿಗಳು, ರಾಜ-ಕಾರಣಿಗಳವರೆಗೂ ಹಗಲು ದರೋಡೆ ನಡೆದಿದೆ.

669 ಕೋಟಿ ಅಕ್ರಮ ಹಣ ಬಳಕೆ, 100 ಕೋಟಿ ವಸೂಲಿಯಾಗಿದೆ. ಅಕ್ರಮದಲ್ಲಿ ಬಳಕೆಯಾದ 643 ಅಧಿಕಾರಿಗಳನ್ನು ಕ್ರಮಕ್ಕೆ ಶಿಫಾರಸ್ಸು ಮಾಡಲಾಗಿದೆ. 306 ಅಧಿಕಾ-ರಿಗಳನ್ನು ಸೇವೆಯಿಂದ ಅಮಾನತ್ತು ಮಾಡಲಾಗಿದೆ. 85 ಅಧಿಕಾರಿಗಳ ವಿರುದ್ಧ ಪ್ರಕರಣ ದಾಖಲಾಗಿದೆಂದು ಈಗಾಗಲೇ ಹಲವಾರು ಪತ್ರಿಕೆಗಳಲ್ಲಿ ವರದಿಯಾಗಿದೆ. ಹಣ ದುರುಪಯೋಗ ತಡೆಯಲು ಕೇಂದ್ರ ಸರ್ಕಾರ 'ನರೇಗಾ 'ಯೋಜನೆಯಲ್ಲಿ ಕೆಲವು ರೂಪರೇಷೆಗಳನ್ನು ಬದಲಾವಣೆ ಮಾಡಲು ಹೊರಟಿದ್ದಾರೆ. ಇದನ್ನೇ ರಾಜ್ಯ ಕಾಂಗ್ರೆಸ್ ಸರ್ಕಾರ ವಿರೋಧ ಮಾಡುತ್ತಿರುವುದು ಎಷ್ಟರಮಟ್ಟಿಗೆ ಸರಿ? ಜೆಸಿಬಿ ಮೂಲಕ ಕೆಲಸ, ಸಾಕಷ್ಟು ಆಸ್ತಿ ಅಂತಸ್ತು ಹೊಂದಿದವರ ಹೆಸ-ರಿನಲ್ಲಿ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಹಣ ಎತ್ತಿದ್ದಾರೆ. ಇದಕ್ಕೆಲ್ಲ ಕೂಲಿ ಕಾರ್ಮಿಕರು ಯಾರೂ ಕೂಡ ಕಿವಿಗೊಡದೆ,

ಈ ಮನರೇಗಾ ಯೋಜನೆಯನ್ನು ಬೆಂಬಲಿಸಬೇಡಿ ಕೇಂದ್ರ ಸರ್ಕಾರದ ಯೋಜನೆಗಳು ದೇಶದ ಜನಸಂಖ್ಯೆಗೆ ಅನುಗುಣವಾಗಿ ಆಧರಿಸಿರುತ್ತವೆ ಹೊರತು ಇಲ್ಲಿ ಕೂಲಿ ಕಾರ್ಮಿಕರಿಗೆ ಅನ್ಯಾಯ ಆಗುವಂತದ್ದಲ್ಲ. ಇದನ್ನೇ ಬಂಡವಾಳ ಮಾಡಿಕೊಂಡು ಕಾಂಗ್ರೆಸ್ ರಾಜ್ಯದಲ್ಲಿ ಅಪಪ್ರಚಾರ ಮಾಡುತ್ತಿದೆ ಎಂದು ತಿಳಿಸಿದರು. ಈ ವೇಳೆ: ಬಿಜೆಪಿ ಜಿಲ್ಲಾ ಘಟಕದ ಉಪಾಧ್ಯಕ್ಷ ಲಿಂಗರಾಜ ಹೂಗಾರ, ನಗರ ಘಟಕದ ಅಧ್ಯಕ್ಷ ಸಿದ್ರಾಮೇಶ ಮನ್ನಾಪೂರು, ಗ್ರಾಮೀಣ ಮಂಡಲ ಅಧ್ಯಕ್ಷ ಯಂಕೋಬ ರಾಮತ್ನಾಳ್, ವಿರೋಜಿ-ರಾವ್ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಕ್ರೀಡೆಯಿಂದ ಉತ್ಸಾಹ ಹಾಗೂ ಚೈತನ್ಯ ಹೆಚ್ಚಾಗಲಿದೆ :ಸಂಸದ ಕೆ. ರಾಜಶೇಖರ ಹಿಟ್ನಾಳ

❑ ನೈಜ್ಯ ದೆಸೆ ನ್ಯೂಸ್

**ಕೊಪ್ಪಳ: ಕ್ರೀಡೆಗಳಿಂದ ನಮ್ಮಲ್ಲಿ ಉತ್ಸಾಹ ಹಾಗೂ ಚೈತನ್ಯ ಹೆಚ್ಚಾಗುವುದರ ಜೊತೆಗೆ ಎಲ್ಲರೂ ಒಂದು ಕಡೆ ಸೇರಲು ಅವಕಾಶ ಮಾಡಿಕೊಡುತ್ತದೆ. ಹಾಗಾಗಿ ಇಂದು ತಾವೆಲ್ಲರೂ ಇಲ್ಲಿ ಸೇರಿದ್ದಿರಾ ಎಂದು ಕೊಪ್ಪಳ ಸಂಸದರಾದ ಕೆ. ರಾಜಶೇಖರ ಬಸವರಾಜ ಹಿಟ್ನಾಳ ಹೇಳಿದರು.ಕೊಪ್ಪಳ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಕೊಪ್ಪಳ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ (ರಿ) ಬೆಂಗಳೂರು, ಜಿಲ್ಲಾ ಶಾಖೆ ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ 2025–26ನೇ ಸಾಲಿನ ಕೊಪ್ಪಳ ಜಿಲ್ಲೆಯ ಜಿಲ್ಲಾ ಮಟ್ಟದ ರಾಜ್ಯ ಸರಕಾರಿ ನೌಕರರ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಗುಂಡು ಎಸೆಯುವ ಮೂಲಕ ಉದ್ಘಾಟನೆ ನೆರವೇರಿಸಿ ಮಾತನಾಡಿದರು.**



ಎಲ್ಲರೂ ಮಕ್ಕಳಿಗೆ ಕ್ರೀಡೆಗಳನ್ನು ಏರ್ಪಡಿಸುತ್ತಿದ್ದವರು ತಾವುಗಳು ಇಂದು ಕ್ರೀಡಾಪಟುಗಳಾಗಿ ಮಕ್ಕಳಂತೆ ಅತಿ ಉತ್ಸಾಹದಿಂದ ಬಂದಿರುವುದು ತುಂಬಾ ಸಂತೊಷ ಅನಿಸುತ್ತಿದೆ. ಸರಕಾರಿ ನೌಕರರು ದಿನಾಲು ಒತ್ತಡದಲ್ಲಿ ಕೆಲಸ ಮಾಡುತ್ತಾರೆ. ಶೇ. 50 ಪ್ರತಿಶತ ಸಿಬ್ಬಂದಿಗಳಿದ್ದರು ಕಛೇರಿಯ ಎಲ್ಲಾ ಕೆಲಸ ಕಾರ್ಯಗಳನ್ನು ನಿರ್ವಹಿಸುವ ತಾವುಗಳು ಇಂತಹ ಕ್ರೀಡೆಗಳಲ್ಲಿ ಭಾಗವಹಿಸುವುದರಿಂದ ಮಾನಸಿಕ ಒತ್ತಡ ಕಡಿಮೆಯಾಗುವುದರ ಜೊತೆಗೆ ಎಲ್ಲರೂ ಟೀಂ ಆಗಿ ಕ್ರೀಡೆಗಳಲ್ಲಿ ಭಾಗವಹಿಸುವುದರಿಂದ ಪರಸ್ಪರ ಸ್ನೇಹ, ಪ್ರೀತಿ ಹಾಗೂ ಆತ್ಮೀಯತೆ ನೌಕರರಲ್ಲಿ ಬೆಳೆಯುತ್ತದೆ. ತಮ್ಮ ಕ್ರೀಡಾಕೂಟ ಎರಡು ದಿನಗಳ ಕಾಲ ಯಶಸ್ವಿಯಾಗಿ ನಡೆಯಲಿ ಎಂದು ಶುಭ ಹಾರೈಸಿದರು. ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ ಅವರು ಮಾತನಾಡಿ, ಕ್ರೀಡೆಯಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆಯುವುದಕ್ಕಿಂತ ಇದರಲ್ಲಿ ಭಾಗವಹಿಸುವುದು ಬಹಳ ಮುಖ್ಯ. ಸರಕಾರಿ ನೌಕರರು ಇತ್ತಿಚೆಗೆ ಹೆಚ್ಚಿನ ಒತ್ತಡದಲ್ಲಿ ಕೆಲಸ ಮಾಡುತ್ತಿದ್ದಾರೆ. ಅವರಿಗೆ ಕ್ರೀಡೆಯಂತಹ ಇತರೆ ಹಲವಾರು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳವುದರಿಂದ ಮನಸ್ಸಿಗೆ ನೆಮ್ಮದಿ ಸಿಗಲಿದೆ.

ಗ್ರಾಮೀಣ ಭಾಗದ ಕ್ರೀಡೆ ಕಬ್ಬಡಿಯಿಂದ ನಮಗೆ ಮತ್ತಷ್ಟು ಬಲ ತರಲಿದೆ. ಬಿಸಿಲು ನಾಡಿನ ಜನ ನಾವು ಬಹಳ ಗಟ್ಟಿ. ಮನೋಬಲದಿಂದ ನಮ್ಮ ಉತ್ಸಾಹ ಇನ್ನಷ್ಟು ಹೆಚ್ಚಾಗಲಿದೆ. ಪುಟ್ಬಾಲ್, ಹಾಕಿ, ವಾಲಿಬಾಲನಂತಹ ಕ್ರೀಡೆಗಳಿಗೆ ನಮ್ಮಲ್ಲಿ ಇನ್ನೂ ಸುಸಜ್ಜಿತ ಟ್ರ?ಯಾಕಗಳು ಆಗಬೇಕಿದೆ ಎಂದು ಹೇಳಿದರು. ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ ಕೊಪ್ಪಳದ ಜಿಲ್ಲಾಧ್ಯಕ್ಷರಾದ ನಾಗರಾಜ ಆರ್. ಜುಮ್ಮನ್ನವರ ಪ್ರಾಸ್ತಾವಿಕವಾಗಿ ಮಾತನಾಡಿ, ಕೊಪ್ಪಳ ಜಿಲ್ಲಾ ಕ್ರೀಡಾಂಗಣದಲ್ಲಿ 2025–26ನೇ ಸಾಲಿನ ಕ್ರೀಡಾಕೂಟ ಪ್ರತಿವರ್ಷದಂತೆ ಈ ವರ್ಷ ಎರಡು ದಿನಗಳ ಕಾಲ ಹಮ್ಮಿಕೊಳ್ಳಲಾಗಿದೆ. ಸರಕಾರಿ ನೌಕರರಾದ ನಾವುಗಳು ಪ್ರತಿನಿತ್ಯ ಒತ್ತಡದಲ್ಲಿ ಕೆಲಸ ಮಾಡುತ್ತೇವೆ.

ಜಿಲ್ಲೆಯ ಶಿಕ್ಷಕರು ಬೋಧನೆಯ ಜೊತೆಗೆ ಇತರೆ ಅನೇಕ ಕೆಲಸಗಳನ್ನು ಮಾಡುತ್ತಾರೆ. ನಾವೆಲ್ಲರೂ ಒತ್ತಡದಿಂದ ಹೊರ ಬರಲು ಎರಡು ದಿನಗಳ ಕಾಲ ಈ ಕ್ರೀಡಾಕೂಟ ಹಮ್ಮಿಕೊಳ್ಳಲಾಗಿದೆ. ನಾನು ಅಧ್ಯಕ್ಷನಾದ ಮೇಲೆ ನಡೆಯುತ್ತಿರುವ ಇದು 13ನೇ ಕ್ರೀಡಾಕೂಟ. ರಾಜ್ಯ ಮಟ್ಟದ ಕ್ರೀಡಾಕೂಟ ನಮ್ಮ ಜಿಲ್ಲೆಯಲ್ಲಿ ನಡೆಸಲು ಮೂಲಭೂತ ಸೌಲಭ್ಯಗಳ ಕೊರತೆ ಇದೆ. ಆದರೂ 2029 ರಲ್ಲಿ ರಾಜ್ಯ ಮಟ್ಟದ ನೌಕರರ ಕ್ರೀಡಾಕೂಟದ ಆಯೋಜನೆಗೆ ನಾವೆಲ್ಲರೂ ಸಂಕಲ್ಪ ಮಾಡಿದ್ದೇವೆ. ನಮ್ಮ ಜಿಲ್ಲೆಯಿಂದ ಕಬ್ಬಡ್ಡಿ, ಕುಸ್ತಿ, ಶೆಟಲ್ ಬ್ಯಾಟ್ಮಿಟನ್ ಸೇರಿದಂತೆ ಇತರೆ ಕ್ರೀಡೆಗಳಲ್ಲಿ ರಾಷ್ಟ್ರಮಟ್ಟದಲ್ಲಿ ಹೆಸರು ಮಾಡಿದ ಹಲವಾರು ಕ್ರೀಡಾಪಟುಗಳಿದ್ದಾರೆ. ಎರಡು ದಿನಗಳ ಕಾರ್ಯಕ್ರಮದಲ್ಲಿ ಕ್ರೀಡೆಯ ಜೊತೆಗೆ ಸಾಂಸ್ಕೃತಿ-ಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಇವುಗಳ ಯಶಸ್ವಿಯಾಗಿ ನಡೆಯಲು ತಮ್ಮ ಎಲ್ಲರ ಸಹಕಾರ ಅತ್ಯಗತ್ಯವಾಗಿದೆ ಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ ಅವರು ಕ್ರೀಡಾ ಧ್ವಜಾರೋಹಣ ನೆರವೇರಿಸಿ ಕ್ರೀಡಾ ಜ್ಯೋತಿಗೆ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ಕ್ರೀಡಾ ಪ್ರತಿಜ್ಞಾ ವಿಧಿಯನ್ನು ಬೋಧನೆ ಮಾಡಲಾಯಿತು. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ಸನ್ಮಾನಿಸಲಾಯಿತು. ಎರಡು ದಿನಗಳ ಈ ಕ್ರೀಡಾಕೂಟದಲ್ಲಿ ಕಬಡ್ಡಿ, ವಾಲಿಬಾಲ, ಟೇಬಲ್ ಟೆನ್ನಿಸ್, ಕೇರಂ, ಚೆಸ್, ಕ್ರೀಕೆಟ್, ಬಾಲ್ ಬ್ಯಾಡ್ಮಿಂಟನ್ ಸೇರಿದಂತೆ ಇತರೆ ಹಲವಾರು ಕ್ರೀಡೆಗಳ ಜೊತೆಗೆ ವಿವಿಧ ಸಾಂಸ್ಕೃತಿ-ಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಈ ಕಾರ್ಯಕ್ರಮದಲ್ಲಿ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಬಸವರಾಜ. ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿಠ್ಠಲ ಜಾಬಗೌಡರ್. ರಾಜ್ಯ ಸರಕಾರಿ ನೌಕರರ ಸಂಘದ ಜಿಲ್ಲಾ ಕಾರ್ಯದರ್ಶಿ ಶಿವಪ್ಪ ಜೋಗಿ, ಖಜಾಂಚಿ ಜಯತೀಥ-ರ್ ದೇಸಾಯಿ, ರಾಜ್ಯ ಪರಿಷತ್ ಸದಸ್ಯರಾದ ಮೆಹಮೂದ್ ಆಸೀಫ್ ಅಲಿ, ಗೌರವ ಅಧ್ಯಕ್ಷರಾದ ಸಿದ್ದಪ್ಪ ಮೇಳಿ, ಕಾರ್ಯಾಧ್ಯಕ್ಷರಾದ ಬೀರಪ್ಪ ಅಂಡಗಿ, ರಾಜ್ಯ ಸಂಘಟನಾ ಪದಾಧಿಕಾರಿಗಳಾದ ಮಹೇಶ ಸಬರದ, ಮಂಜುನಾಥ ಆರೆಂಟನೂರ, ಶ್ರೀ ನಿವಾಸ ನಾಯಕ ಸೇರಿದಂತೆ ಜಿಲ್ಲೆಯ ವಿವಿಧ ತಾಲ್ಲೂಕುಗಳಿಂದ ಆಗಮಿಸಿದ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ನೌಕರರ ಸಂಘದ ಇತರೆ ಪದಾಧಿಕಾ-ರಿಗಳು ಮತ್ತು ಸರಕಾರಿ ನೌಕರರು ಉಪಸ್ಥಿತರಿದ್ದರು.